ಸಂಪುಟ : 9 ಸಂಚಿಕೆ 260 ಪುಟ : 4 ಬೆಲೆ: 3.00 ಮಂಗಳವಾರ ನವೆಂಬರ್ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 260 Pages : 4 Price : 3.00 Tuesday November 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ‘ಶಾಶ್ವತ ಚಿತ್ರ ರದ್ದತಿ’ ಲೋಕಾರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಅಂಚೆ ಇಲಾಖೆಯು ‘ಕರ್ನಾಟಕ ಸಂಭ್ರಮ-50’ರ ಅಂಗವಾಗಿ, ಕರ್ನಾಟಕದ ಪ್ರತಿ ಜಿಲ್ಲೆಗೆ ಒಂದು ಚಿತ್ರಾತ್ಮಕ ರದ್ದತಿಯನ್ನು ಮಾಡಲು ಪ್ರಸ್ತಾಪಿಸಿದ್ದು, ಈ ನಿಟ್ಟಿನಲ್ಲಿ ಸಕ್ಷಮ ಪ್ರಾಧಿಕಾರವು ನ.26ರಂದು ಬೆಳಿಗ್ಗೆ 10 ಗಂಟೆಗೆ ಮೇಘದೂತ ಆಡಿಟೋರಿಯಂ ಬೆಂಗಳೂರು ಜಿ.ಪಿ.ಓ.ನಲ್ಲಿ ಸಂವಿಧಾನ ದಿನದ ಸಂದರ್ಭದಲ್ಲಿ 12 ‘ಶಾಶ್ವತ ಚಿತ್ರ ರದ್ದತಿ’ಗಳನ್ನುವಾಸ್ತವಿಕವಾಗಿ ಬಿಡುಗಡೆ ಮಾಡಲು ತಿಳಿಸಲಾಗಿದೆ.

ಎಲ್ಲಾ ಶಾಶ್ವತ ಚಿತ್ರಗಳನ್ನು ಕರ್ನಾಟಕ ವಲಯದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ರಾಜೇಂದ್ರ ಕುಮಾರ ಎಸ್ ಇವರ ಅಮೃತ ಹಸ್ತದಿಂದ ನ.26ರಂದು ಬಿಡುಗಡೆ ಮಾಡಲಾಗುವುದು.

ತದನಂತರ ಗದಗ ಜಿಲ್ಲೆಯ ‘ಕುಮಾರವ್ಯಾಸ’ ಇವರ ಹೆಸರಿನಲ್ಲಿ ವಿಶೇಷ ‘ಶಾಶ್ವತ ಚಿತ್ರ ರದ್ದತಿ’ ಮುದ್ರೆಯ ಲೋಕಾರ್ಪಣೆಯನ್ನು ಗದಗ ವಿಭಾಗದ ಅಂಚೆ ಅಧೀಕ್ಷಕ ಜಯದೇವ ಶಿ.ಕಡಗಿ ಇವರ ಅಮೃತ ಹಸ್ತದಿಂದ 10 ಗಂಟೆಗೆ ನಗರದ ವೀರನಾರಾಯಣ ದೇವಸ್ಥಾನದಲ್ಲಿ ನೆರವೇರಿಸಲಾಗುವುದು.

ಈ ಸಮಾರಂಭದಲ್ಲಿ ಗದಗ ವಿಭಾಗದ ಅಧೀಕ್ಷಕ ಜಯದೇವ ಶಿ.ಕಡಗಿ, ಸಹಾಯಕ ಅಂಚೆ ಅಧೀಕ್ಷಕರು ಗದಗ ಉಪ ವಿಭಾಗ, ಅಂಚೆ ನಿರೀಕ್ಷಕರು-ರೋಣ, ಪ್ರಧಾನ ಅಂಚೆ ಪಾಲಕರು ಗದಗ ಹಾಗೂ ಸಮಸ್ತ ಗದಗ ಅಂಚೆ ವಿಭಾಗದ ಸಿಬ್ಬಂದಿ ವರ್ಗದವರು ಮತ್ತು ಶ್ರೀ ವೀರನಾರಾಯಣ ದೇವಸ್ಥಾನದ ಆಡಳಿತಾಧಿಕಾರಿಗಳು, ಭಕ್ತಾದಿಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರೋಡ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನ.26ರಂದು ತ್ರೈಮಾಸಿಕ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಸಂಭಾಪೂರ ರೋಡ್ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ನಿರಂತರ ಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ವಿನಂತಿಸಲಾಗಿದೆ.

### ಬಸವ ಪುರಾಣ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ ಅಭಿಮತ

## ಬಸವಣ್ಣನವರ ಮೌಲ್ಯಗಳು ಸಮಾಜಕ್ಕೆ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಈ ನಾಡಿನ ಮಠ ಮಾನ್ಯಗಳು, ಶ್ರದ್ಧಾ ಕೇಂದ್ರಗಳು, ಬಸವಣ್ಣನವರ ವೈಚಾರಿಕ ವಿಚಾರಗಳನ್ನು ಮೂಡಿಸುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸುತ್ತಿರುವದು ಶ್ಲಾಘನೀಯ ಎಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಇಲ್ಲಿಯ ಸಮಿಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ ಕಾರ್ತಿಕೋತ್ಸವದ ಲಕ್ಷ ದೀಪೋತ್ಸದಂಗವಾಗಿ ಹಮ್ಮಿಕೊಂಡ ಬಸವ ಪುರಾಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನಕಗಿರಿಯ ಸುವರ್ಣ ಸಂಸ್ಥಾನ ಮಠದ ಡಾ. ಚನ್ನಮಲ್ಲ ಮಹಾಸ್ವಾಮಿಗಳು ಮಾತನಾಡಿ, ಬದುಕಿನಲ್ಲಿರುವ ಅಂಧಕಾರವನ್ನು ಕಳೆದು ಬೆಳಕು ಮೂಡಲು ಲಕ್ಷ ದೀಪೋತ್ಸವದಂಗವಾಗಿ ಬಸವ ಪುರಾಣ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಸುತ್ತ್ಯಾರ್ಹವಾಗಿದೆ ಎಂದರು.




ಡಾ. ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿ, 12ನೇ ಶತಮಾನದ ಬಸವಾದಿ ಪ್ರಮಥರು ಕಾಯಕದ ಮೂಲಕ ಈ ಸಮಾಜಕ್ಕೆ ವಚನ ಸಾಹಿತ್ಯದ ಮೂಲಕ ಅರಿವನ್ನು ನೀಡಿ ಜೀವನಕ್ಕೆ ಮೌಲ್ಯವನ್ನು ಕೊಟ್ಟಿದ್ದಾರೆ ಎಂದರು.

ಡಾ. ಶಾಂತವೀರ ಶಿವಾಚಾರ್ಯರು ಬಸವ ಪುರಾಣ ಪ್ರವಚನ ಮಾಡಿದರು. ಪರಶುರಾಮ ಚಟ್ನಳ್ಳಿ, ಯಲ್ಲಪ್ಪ ಗುಂಡಳ್ಳಿ ಸಂಗೀತ ಸೇವೆ ನೀಡಿದರು. ಲಕ್ಕುಂಡಿ ಅಲ್ಲಮಪ್ರಭುದೇವರ ಮಠದ ಸಿದ್ದಲಿಂಗ ಶ್ರೀಗಳು, ಬಿ.ಬಿ. ಅಸೂಟಿ, ವಾಸಣ್ಣ ಕುರಡಗಿ, ಕೃಷ್ಣಗೌಡ ಪಾಟೀಲ, ಗ್ರಾ.ಪಂ ಅಧ್ಯಕ್ಷೆ ರೇಣುಕಾ ವಡ್ಡರ, ಉಪಾಧ್ಯಕ್ಷ ಅಡಿವೆಪ್ಪ ಗೌಡಪ್ಪನವರ, ಅಶ್ವಿನಿ ಮರಡಿ, ಗೋವಿಂದರೆಡ್ಡಿ ಕೊಣ್ಣೂರು, ಪ್ರಾಥಮಿಕ ಶಾಲೆಯ ಶಿಕ್ಷಕರು, ಗ್ರಾ.ಪಂ ಸದಸ್ಯರು ವೇದಿಕೆಯಲ್ಲಿದ್ದರು. ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಎಸ್.ಸಿ. ಸರ್ವಿ ಸ್ವಾಗತಿಸಿದರು. ವೆಂಕಟೇಶ ಜುಂಜಣಿ ನಿರೂಪಿಸಿದರು. ರಾಮಣ್ಣ ಬೆಳಧಡಿ ವಂದಿಸಿದರು.

> ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಈರುಳ್ಳಿಯನ್ನು ಖರೀದಿಸಬೇಕು ಹಾಗೂ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಇನ್ಸೂರೆನ್ಸ್ ಕಂಪನಿ ಈರುಳ್ಳಿ ಬೆಳೆಗೆ ವಿಮೆ ತುಂಬಿಸಿಕೊಂಡಿದ್ದು ಬೇಗನೆ ಬೆಳೆ ಸಮೀಕ್ಷೆ ನಡೆಸಿ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು. ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲಾದ್ಯಂತ ಹೋರಾಟ ಮಾಡಲಾಗುವುದು.
>
> **-ಯಲ್ಲಪ್ಪ ಎಚ್ ಬಾಬರಿ, ಜಿಲ್ಲಾಧ್ಯಕ್ಷರು, ಹಸಿರು ಸೇನೆ, ನಾರಾಯಣರೆಡ್ಡಿ ಬಣ**

### ಸರ್ವಧರ್ಮ ಸಮನ್ವಯ ಪೀಠದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶಿವಮೂರ್ತಿ ಶ್ರೀಗಳು

## ಜಿ.ಎಸ್. ಪಾಟೀಲರದು ನಿಸ್ವಾರ್ಥ ಸೇವೆ

■ವಿಜಯಸಾಕ್ಷಿ ಸುದ್ದಿ, ರೋಣ

ಧಾರ್ಮಿಕ ಕಾರ್ಯಗಳಲ್ಲಿ ಶಾಸಕ ಜಿ.ಎಸ್. ಪಾಟೀಲ ಮುಂಚೂಣಿಯಲ್ಲಿದ್ದು, ಅವರ ನಿಸ್ವಾರ್ಥ ಸೇವೆ ಮೆಚ್ಚುವಂತದ್ದು ಎಂದು ಶಿವಮೊಗ್ಗ ಜಿಲ್ಲೆಯ ಹಿರೇಮಾಗಡಿ ಮುರಘಾ ಮಠ ಹಾಗೂ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಪೂಜ್ಯರಾದ ಶಿವಮೂರ್ತಿ ಶ್ರೀಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಲೋಕಾರ್ಪಣೆ ಕಾರ್ಯಕ್ರಮದ ನಿಮಿತ್ತ ಜರುಗಿದ ಹೋಮ, ವಾಸ್ತು ಶಾಂತಿ, ಧಾರ್ಮಿಕ ಕಾರ್ಯಕ್ರಮದ ನಂತರ ಆಶೀರ್ವಚನ ನೀಡಿದರು.

ಶಾಸಕ ಜಿ.ಎಸ್. ಪಾಟೀಲರು ಹಾಗೂ ಕುಟುಂಬಸ್ಥರು ಯಾವುದೇ ಜಾತಿ, ಧರ್ಮಗಳನ್ನು ನೋಡದೆ ಸರ್ವಧರ್ಮದವರ ಆಚರಣೆಗಳಲ್ಲಿ ಭಾಗಿಯಾಗಿ ತಮ್ಮ ಧಾರ್ಮಿಕ ಸೇವೆಯನ್ನು ಸಲ್ಲಿಸುತ್ತಾರೆ. ಹೀಗಾಗಿ ಅವರೊಬ್ಬ ಧಾರ್ಮಿಕ ಚಿಂತಕ ಎನ್ನುವುದರಲ್ಲಿ ಸಂದೇಹವಿಲ್ಲ ಎಂದ ಶ್ರೀಗಳು, ಶಾಸಕ ಜಿ.ಎಸ್. ಪಾಟೀಲ ರಾಜಕೀಯ ಕ್ಷೇತ್ರದಲ್ಲಿ ಮತ್ತಷ್ಟು ಉತ್ತಂಗದತ್ತ ಸಾಗಿ ಮತಕ್ಷೇತ್ರ ಸೇರಿದಂತೆ ರಾಜ್ಯದ ಸೇವೆಗೈಯಲಿ ಎಂದು ಹಾರೈಸಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ದೇವರು ಎಲ್ಲರಿಗೂ ಒಂದೇ ಆಗಿದ್ದು, ಮನುಷ್ಯರಾದ ನಾವು ಅರ್ಥ ಮಾಡಿಕೊಂಡು ನಮ್ಮ ಜೀವನ ನಿರ್ವಹಿಸಬೇಕು.



ಮಾರನಬಸರಿ ಗ್ರಾಮದ ಏಕತೆ ನಾಡಿಗೆ ಮಾದರಿಯಾಗಿದೆ. ಇಂತಹ ಗ್ರಾಮದಲ್ಲಿ ಸರ್ವಧರ್ಮ ಸಮನ್ವಯ ಪೀಠ ಸ್ಥಾಪನೆಯಾಗಿದ್ದು ಸ್ವಾಗತಾರ್ಹ. ಗ್ರಾಮ ಧಾರ್ಮಿಕ ಕಾರ್ಯಗಳಿಂದ ಮತ್ತಷ್ಟು ಹೆಮ್ಮರವಾಗಿ ಬೆಳೆಯಲಿ ಎಂದರು.

> ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠಕ್ಕೆ ಶಾಸಕ ಜಿ.ಎಸ್. ಪಾಟೀಲ ಸೇರಿದಂತೆ ಮಾರನಬಸರಿ ಗ್ರಾಮದ ಭಕ್ತರ ಕೊಡುಗೆ ಅಪಾರವಾಗಿದೆ. ಶ್ರೀಮಠ ಸರ್ವ ಭಕ್ತರ ಆಸ್ತಿಯಾಗಿದ್ದು, ಶ್ರೀಮಠದ ಬೆಳವಣಿಗೆಯಲ್ಲಿ ಸರ್ವರೂ ಕೈಜೋಡಿಸಬೇಕು.
>
> – ಶಿವಮೂರ್ತಿ ಶ್ರೀಗಳು.
> ಸರ್ವಧರ್ಮ ಸಮನ್ವಯ ಪೀಠ, ಮಾರನಬಸರಿ.

ಧಾರ್ಮಿಕ ಕಾರ್ಯದಲ್ಲಿ ಭಾಗಿಯಾಗಿದ್ದ ಶಾಸಕ ಪಾಟೀಲ ದಂಪತಿಗಳಿಗೆ ಶಿವಮೂರ್ತಿ ಶ್ರೀಗಳು ಸನ್ಮಾನಿಸಿ ಆಶೀರ್ವದಿಸಿದರು. ಶಿವಯೋಗಿ ದೇವರು ಸಮ್ಮುಖ ವಹಿಸಿದ್ದರು. ಶರಣಪ್ಪ ಕುರಿ, ಶೇಖರಗೌಡ ಪಾಟೀಲ, ಮರ್ತುಜಸಾಬ ಮೋತೆಖಾನ್, ಈರಪ್ಪ ನಿಡಗುಂದಿ, ಅಡಿವೆಪ್ಪ ಜಿಗಳೂರ, ಎಸ್.ಎಚ್. ಹಾದಿಮನಿ, ಕಾಶೀಮಸಾಬ ದೋಟಿಹಾಳ, ಶಿವಕುಮಾರ ದಿಂಡೂರ, ಶಿವಶರಣಪ್ಪ ಅಬ್ಬಿಗೇರಿ, ವೀರಣ್ಣ ಶಾಖಾ, ಅಲ್ಲಾಸಾಬ ಮೋತೆಖಾನ್, ರಿಯಾಜ್ ಸವಡಿ, ರವಿ ಗಡಾದ, ಮಹ್ಮದ ಸವಡಿ, ಶ್ರೀಶೈಲ್ ಶಾಂತಗೀರಮಠ, ಚಂದ್ರಯ್ಯಜ್ಜ ಹಿರೇಮಠ, ವಿರೂಪಾಕ್ಷಪ್ಪ ಮರಡಿ, ಎಸ್.ಬಿ. ಪೂಜಾರ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಹಿರಿಯ ರಂಗಕರ್ಮಿ ಆರ್.ಎನ್. ಕುಲಕರ್ಣಿ ನಿಧನ

ಗದಗ: ವಿದ್ಯಾದಾನ ಸಮಿತಿ ಬಾಲಕಿಯರ ಪ.ಪೂ ಕಾಲೇಜಿನ ನಿವೃತ್ತ ಹಿಂದಿ ಉಪನ್ಯಾಸಕ, ಕರ್ನಾಟಕ ನಾಟಕ ಅಕಾಡಮಿ ಪ್ರಶಸ್ತಿ ಪುರಸ್ಕೃತ ಹಿರಿಯ ನಾಟಕ ಬರಹಗಾರ, ನಟ, ನಿರ್ದೇಶಕ, ರಂಗಕರ್ಮಿ ರಮೇಶ ನಾರಾಯಣ ಕುಲಕರ್ಣಿ (84) ಸೋಮವಾರ ಮುಂಜಾನೆ ಬೆಂಗಳೂರಿನಲ್ಲಿ ನಿಧನ ಹೊಂದಿದರು. ಅವರು ಪತ್ನಿ, ಪುತ್ರ, ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಹಿಂದಿ ಭಾಷೆಯಲ್ಲಿ ಅಪಾರ ಪಾಂಡಿತ್ಯ ಹೊಂದಿಜಜಿಜ ಆರ್. ಎನ್. ಕುಲಕರ್ಣಿಯವರು ಕನ್ನಡ ಹಾಸ್ಯ ನಾಟಕ ಕ್ಷೇತ್ರದಲ್ಲಿ ಅಪಾರ ಸಾಧನೆಗೈದಿದ್ದರು. 50ಕ್ಕೂ ಹೆಚ್ಚು ಹವ್ಯಾಸಿ ಹಾಸ್ಯ ನಾಟಕಗಳನ್ನು ರಚಿಸಿದ್ದಾರಲ್ಲದೇ 300ಕ್ಕೂ ಹೆಚ್ಚು ನಾಟಕಗಳನ್ನು ನಿರ್ದೇಶಿಸಿದ್ದಾರೆ. 500ಕ್ಕೂ ಹೆಚ್ಚು ನಾಟಕಗಳಿಗೆ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಉತ್ತರ ಕರ್ನಾಟಕದ ಅನೇಕ ಪ್ರಮುಖ ಕಲಾವಿದರಿಗೆ ಮಾರ್ಗದರ್ಶಕರಾಗಿದ್ದರು.



ಗದಗ ಪರಿಸರದಲ್ಲಿ ಆರ್.ಎನ್.ಕೆ. ಮಿತ್ರಮಂಡಳಿಯ ಸಂಸ್ಥಾಪಕ ಅಧ್ಯಕ್ಷರಾಗಿ ಸಾವಿರಕ್ಕೂ ಹೆಚ್ಚು ಹಾಸ್ಯ ಲೇಪಿತ ನೀತಿ ಬೋಧಕ ನಾಟಕಗಳನ್ನು ಪ್ರದರ್ಶಿಸಿದ್ದಾರೆ. ‘ಮೈಲಾರಲಿಂಗ’ ಸೇರಿದಂತೆ ಅನೇಕ ಚಲನಚಿತ್ರಗಳು ಹಾಗೂ ‘ತಲೆದಂಡ’ದಂತಹ ರಾಷ್ಟ್ರಮಟ್ಟದಲ್ಲಿ ಸುದ್ದಿ ಮಾಡಿದ ಹೆಸರಾಂತ ನಾಟಕಗಳಲ್ಲಿ ಭಾವಪೂರ್ಣ ಅಭಿನಯ ನೀಡಿದ್ದಾರೆ.

**ಸಂತಾಪ:** ಹಿರಿಯ ರಂಗಕರ್ಮಿ ಆರ್.ಎನ್.ಕೆ ನಿಧನಕ್ಕೆ ಸಚಿವರಾದ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ವಿದ್ಯಾದಾನ ಸಮಿತಿ ಅಧ್ಯಕ್ಷರಾದ ಡಿ.ಬಿ. ಹುಯಿಲಗೋಳ, ಕಾರ್ಯದರ್ಶಿಗಳಾದ ಶ್ರೀನಿವಾಸ ಹುಯಿಲಗೋಳ, ಆರ್.ಎನ್.ಕೆ ಮಿತ್ರಮಂಡಳಿಯ ಕಾರ್ಯದರ್ಶಿ ಮುರಲೀಧರ ಸಂಕನೂರ ಹಾಗೂ ಸದಸ್ಯರು ವಿ.ದಾ.ಸ.ಬಾಲಕಿಯರ ಪ.ಪೂ.ಕಾಲೇಜು ಪ್ರಾ. ಬಿ.ಎಸ್. ರಾಠೋಡ, ಹಾಗೂ ಸಿಬ್ಬಂದಿ ವರ್ಗದವರು, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹಾಗೂ ಸದಸ್ಯರು, ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಹಾಗೂ ಸದಸ್ಯರು, ಗದಗ ತಾಲೂಕಾ ಬ್ರಾಹ್ಮಣ ಸಂಘದ ಅಧ್ಯಕ್ಷ ದತ್ತಣ್ಣ ಜೋಶಿ ಹಾಗೂ ಸದಸ್ಯರು, ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಅಧ್ಯಕ್ಷ ಮೌನೇಶ ಬಡಿಗೇರ ಹಾಗೂ ಸದಸ್ಯರು, ರಾಘವೇಂದ್ರ ಕಲಾಬಳಗದ ಅಧ್ಯಕ್ಷ ಗುರುರಾಜ ಬಳಗಾನೂರ, ಸಂಚಾಲಕ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ, ಇತಿಹಾಸ ಅಕಾಡೆಮಿಯ ಡಾ.ದತ್ತಪ್ರಸನ್ನ ಪಾಟೀಲ ಹಾಗೂ ಸದಸ್ಯರು, ಗದಗ ಪರಿಸರದ ಹವ್ಯಾಸಿ ಕಲಾವಿದರು ಹಾಗೂ ಬರಹಗಾರರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಹೊಳಗಟ್ಟಿಯನ್ನು ಭದ್ರಪಡಿಸಿ ಸ್ಮಾರಕವನ್ನಾಗಿ ರೂಪಿಸಲು ಸಚಿವರಿಗೆ ಮನವಿ

## ‘ಕೂಡು ಜಲ ಸಂಗಮ’ ಪ್ರಸಿದ್ಧವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಂದ 4 ಕೀ.ಮೀ ದೂರದಲ್ಲಿರುವ ಅಕ್ಕಮ್ಮ ಬಸಪ್ಪ ಕಟಿಗ್ಗಾರ ಅವರ ಜಮೀನಿನಲ್ಲಿ ಪ್ರಾಚ್ಯಾವಶೇಷಗಳಿಂದ ನಿರ್ಮಾಣವಾಗಿರುವ ಹೊಳಗಟ್ಟಿಯನ್ನು ಭದ್ರಪಡಿಸಿ ಸ್ಮಾರಕವನ್ನಾಗಿ ರೂಪಿಸಬೇಕೆಂದು ಇಲ್ಲಿಯ ರೈತರು ಒತ್ತಾಯಿಸಿದ್ದಾರೆ.

ಈ ಕುರಿತು ಹೊಳಗಟ್ಟಿ ಜಮೀನಿಗೆ ಭೇಟಿ ನೀಡಿದ ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಮನವಿ ಪತ್ರ ಸಲ್ಲಿಸಿದ ರೈತರು, ಲಕ್ಕುಂಡಿಯ ಗತ ವೈಭವವನ್ನು ಮರು ಸೃಷ್ಟಿಸಲು ಗ್ರಾಮದ ಮನೆ, ತಿಪ್ಪೆ, ಹಿತ್ತಲು, ಹೊಲದ ಬದುಗಳಲ್ಲಿ, ಕೆರೆಗಳಲ್ಲಿ, ಹೊಳಗಟ್ಟಿಗಳಲ್ಲಿ ಜೋಡಿಸಲಾಗಿರುವ ಪ್ರಾಚ್ಯಾವಶೇಷಗಳನ್ನು ಸಂಗ್ರಹ ಮಾಡುತ್ತಿರುವುದು ಸಂತಸದ ವಿಷಯವಾಗಿದೆ. ಅದರಂತೆ ಲಕ್ಕುಂಡಿ ದಕ್ಷಿಣ ಭಾಗದ ಜಮೀನು ಸರ್ವೆ ನಂ-216ರ ಹಿಸ್ಸಾ 1ರಲ್ಲಿ ಅಕ್ಕಮ್ಮ ಬಸಪ್ಪ ಕಟಿಗ್ಗಾರ ಅವರ ಜಮೀನಿನಲ್ಲಿ ದೊಡ್ಡ ಪ್ರಮಾಣದ ಹೊಳಗಟ್ಟಿಯಿದೆ. ಈ ಹೊಳಗಟ್ಟಿಯನ್ನು ಹಿರಿಯರು ಪ್ರಾಚ್ಯ ವಸ್ತುಗಳ ಕಲ್ಲುಗಳಿಂದ ನಿರ್ಮಾಣ ಮಾಡಿದ್ದು ಕಂಡುಬಂದಿದೆ.



ಈ ಪ್ರಾಚ್ಯಾವಶೇಷಗಳ ಸ್ಮಾರಕಗಳನ್ನು ತೆರವುಗೊಳಿಸಿ ಸಂಗ್ರಹ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಆದರೆ ಈ ಹೊಳಗಟ್ಟಿಗೆ ನೂರಾರು ಹೆಕ್ಟೆರ್ ಜಮೀನುಗಳಿಂದ ಮಳೆಯ ನೀರು ಹರಿದು ಬರುತ್ತದೆ. ಈ ನೀರು ಬರುವುದರಿಂದ ನಮ್ಮೆಲ್ಲರ ಜಮೀನಿನಲ್ಲಿರುವ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗುತ್ತಿದೆ. ಈ ಹೊಳಗಟ್ಟಿ ಸರಿಪಡಿಸಲು ಸಾಕಷ್ಟು ಶ್ರಮ ಹಾಗೂ ಅಧಿಕ ಹಣ ಖರ್ಚು ಮಾಡಲಾಗಿದೆ.

ಈ ಹೊಳಗಟ್ಟಿಗೆ ಜೋಡಿಸಲಾಗಿರುವ ಪ್ರಾಚ್ಯಾವಶೇಷಗಳನ್ನು ತೆರವುಗೊಳಿಸದೇ ಇನ್ನಷ್ಟು ಭದ್ರಪಡಿಸಿ ಸುಂದರ ತಾಣವನ್ನಾಗಿ ಮಾಡಿ ಲಕ್ಕುಂಡಿ ಆಗಮಿಸುವ ಪ್ರವಾಸಿಗರಿಗೆ ವಿಕ್ಷಿಸುವಂತಾಗಲು ಸರಕಾರ ಮುಂದಾಗಬೇಕೆಂದು ಸ್ಥಳೀಯರಾದ ರವಿರಾಜ ಕಟಿಗ್ಗಾರ, ಮಂಜುನಾಥ ಕಟಿಗ್ಗಾರ, ಮಲ್ಲಪ್ಪ ಮಂಗಳೂರು, ಯಲ್ಲಪ್ಪ ಮುಳ್ಳಾಳ, ಬಸವಣ್ಣೆಪ್ಪ ಶೇಡದ, ಮಹಾಂತೇಶಗೌಡ ಪಾಟೀಲ, ಮುಜರಪ್ಪ ಜವಳಬೆಂಚಿ, ಈರಪ್ಪ ಸಾಲಮನಿ, ರಾಮಣ್ಣ ಕಲಾಲ, ವೀರಪ್ಪ ಗರ್ಜಪ್ಪನವರ, ಪ್ರಕಾಶ ಹಣವಾಳ, ಹುಲಗಪ್ಪ ಹಳ್ಳಿಕೇರಿ, ಪಾಲಾಕ್ಷಪ್ಪ ಹಣವಾಳ, ವೀರಯ್ಯ ಗಂಧದ, ಮಹಾಂತೇಶ ಕಮತರ, ಕೊಟ್ರಪ್ಪ ಬಳಿಗೇರ, ಈರಪ್ಪ ಕಮತರ, ಬಸಪ್ಪ ತಿಮ್ಮಾಪೂರ, ಮುತ್ತಪ್ಪ ಬಟ್ಟೂರ, ಮಲ್ಲಪ್ಪ ಗರ್ಜಪ್ಪನವರ, ನಿಂಗಪ್ಪ ಮಡಿವಾಳರ, ನೀಲಮ್ಮ ವಡ್ಡರ, ಕಲ್ಲಪ್ಪ ಅಂಬಕ್ಕಿ ಸೇರಿದಂತೆ ನೂರಾರು ರೈತರು ಮನವಿ ಮಾಡಿದರು.

> ಈ ಹೊಳಗಟ್ಟಿಯಿಂದ ಹರಿದು ಹೋಗುವ ನೀರು ಜಾಡು ಹಳ್ಳವಾಗಿ ‘ಕೂಡಲ ಸಂಗಮ’ ನದಿಗೆ ತಲುಪುತ್ತದೆ. ಇದರ ಮೂಲ ನೆಲೆ ಅಕ್ಕಮ್ಮ ಕಟಿಗ್ಗಾರ ಅವರ ಜಮೀನಾಗಿದ್ದು, ಆದ್ದರಿಂದ ಇದಕ್ಕೆ ‘ಕೂಡು ಜಲ ಸಂಗಮ’ ಎಂದು ನಾಮಕರಣ ಮಾಡಿ ಇದನ್ನು ಒಂದು ಸ್ಮಾರಕವನ್ನಾಗಿ ಪ್ರಸಿದ್ಧಿ ಮಾಡಬೇಕು ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

## ಸಂಪಾದಕೀಯ

# ಭಾರತದ ಮಾನ ಹರಾಜು ಹಾಕಿದ ಗೌತಮ ಅದಾನಿ

ದೇಶದಲ್ಲಿ ಔದ್ಯೋಗಿಕ ಕ್ರಾಂತಿಗೆ ಕಾರಣರಾದವರಲ್ಲಿ ಗೌತಮ ಅದಾನಿ ಸಹ ಒಬ್ಬರು. ಅದಾನಿ ಸಮೂಹ ಸಂಸ್ಥೆಗಳ ಮೂಲಕ ಹಲವು ಉದ್ಯಮ, ಉತ್ಪಾದನೆ ಕ್ಷೇತ್ರದಲ್ಲಿ ಸಾಕಷ್ಟು ತೊಡಗಿಸಿಕೊಂಡು ದೇಶದ ಆರ್ಥಿಕತೆಯನ್ನು ನಿರ್ಧರಿಸುವಷ್ಟರ ಮಟ್ಟಿಗೆ ಗೌತಮ ಅದಾನಿ ಬೆಳೆದು ನಿಂತಿದ್ದಾರೆ.

ಗುಜರಾತ್ ಮೂಲದ ಗೌತಮ ಅದಾನಿ, ಮಧ್ಯಮ ವರ್ಗದಿಂದ ಬಂದವರು. ವ್ಯವಹಾರಿಕ ಕೌಶಲತೆಯಿಂದ ಬಹುಬೇಗ ಉದ್ಯಮಿಯಾಗಿ ಬದಲಾಗಿ ಇವತ್ತು ಅದಾನಿ ಸಮೂಹ ಸಂಸ್ಥೆಯ ಮುಖ್ಯಸ್ಥರಾಗಿದ್ದಾರೆ. ಅದಾನಿ ಸಮೂಹ ಸಂಸ್ಥೆಗೆ ಸೇರಿದ ಅನೇಕ ಕಂಪನಿಗಳು ಇವತ್ತು ಷೇರುಮಾರುಕಟ್ಟೆಯಲ್ಲಿ ರಾರಾಜಿಸುತ್ತಿವೆ.

ಆದರೆ ಅದಾನಿ ಸಮೂಹದ ಷೇರುಗಳು ಕೃತಕ ಬೆಲೆಯಲ್ಲಿ ಮಾರಾಟವಾಗುತ್ತಿವೆ ಎಂದು ಹಿಡನ್ ಬರ್ಗ ವರದಿ ಬರುತ್ತಿದ್ದಂತೆ ಭಾರತೀಯ ಷೇರು ಮಾರುಕಟ್ಟೆಯಲ್ಲಿ ಬಹುದೊಡ್ಡ ಸಂಚಲನ ಸೃಷ್ಟಿಸಿತು. ಅದರಲ್ಲೂ ಅದಾನಿ ಸಮೂಹ ಸಂಸ್ಥೆಗಳಿಗೆ ಸೇರಿದ ಷೇರುಗಳಲ್ಲಿ ಹೂಡಿಕೆ ಮಾಡಿದವರು ಭಾರೀ ನಷ್ಟ ಅನುಭವಿಸಬೇಕಾಯಿತು.

ಸದ್ಯ ಮತ್ತೊಮ್ಮೆ ಅದಾನಿ ಸಮೂಹ ಸಂಸ್ಥೆಗಳ ಷೇರುಗಳು ಪಾತಾಳಕ್ಕೆ ತಲುಪಿದ್ದು, ಅದಾನಿ ಸಮೂಹ ಸಂಸ್ಥೆಗಳ ಹೂಡಿಕೆಗೆ ಅರ್ಹವಲ್ಲ ಎನ್ನುವಂತಾಗಿದೆ. ಅಮೆರಿಕಾದ ಕೋರ್ಟ್‌ನಲ್ಲಿ ಗೌತಮ ಅದಾನಿ ವಿರುದ್ಧ ಲಂಚ ಪ್ರಕರಣದ ಆರೋಪ ಪಟ್ಟಿ ಸಲ್ಲಿಕೆಯಾಗಿರುವುದು ಭಾರತೀಯ ಷೇರು ಮಾರುಕಟ್ಟೆ ಮೇಲೆ ವ್ಯಾಪಕ ಪರಿಣಾಮ ಬೀರುತ್ತಿದೆ.

ಅದಾನಿ ಸಮೂಹದ ಮೇಲಿನ ಆರೋಪ ಇಡೀ ಭಾರತೀಯ ಷೇರುಮಾರುಕಟ್ಟೆ ಮೇಲೆ ಪರಿಣಾಮ ಉಂಟು ಮಾಡಿತು. ವಿಶೇಷವಾಗಿ ಅದಾನಿ ಸಮೂಹದಲ್ಲಿ ಹೂಡಿಕೆ ಮಾಡಿದವರು ಭಾರೀ ನಷ್ಟಕ್ಕೆ ತುತ್ತಾದರು. ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಭಾರತ ಬಿಟ್ಟು ಚೀನಾ ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಆರಂಭಿಸಿದ ಕಾಲಘಟ್ಟದಲ್ಲಿಯೇ ಇಂಥದ್ದೊಂದು ಸಂದರ್ಭ ಎದುರಾಗಿರುವುದು ಭಾರತೀಯ ಷೇರು ಮಾರುಕಟ್ಟೆ ಬಗ್ಗೆ ಅಪನಂಬಿಕೆ ಮೂಡಲು ಕಾರಣವಾಗಿದೆ.

ಭಾರತೀಯ ಷೇರುಪೇಟೆ ನಿಯಂತ್ರಣ ಮಂಡಳಿ (ಸೆಬಿ) ಈಗಾಗಲೇ ಗೌತಮ ಅದಾನಿ ಸಮೂಹ ಸಂಸ್ಥೆಗಳ ಮೇಲಿನ 24 ಆರೋಪಗಳ ವಿರುದ್ಧ ತನಿಖೆ ನಡೆಸಿದೆ. ಆದರೆ ಒಂದೇ ಒಂದು ತನಿಖೆಯ ವರದಿಯನ್ನು ಬಹಿರಂಗಪಡಿಸಿಲ್ಲ. ಇದು ಸಹ ಅನುಮಾನಕ್ಕೆ ಕಾರಣವಾಗಿದೆ. ಸೆಬಿ ಇಂಥ ವಿಷಯದಲ್ಲಿ ಗೌಪ್ಯತೆ ಕಾಪಾಡಿಕೊಂಡಷ್ಟು ಮಾರುಕಟ್ಟೆ ಪ್ರಪಾತಕ್ಕೆ ಜಾರಲಿದೆ.

ರಾಜಕೀಯ ಕಾರಣಗಳಿಗಾಗಿ ಗೌತಮ ಅದಾನಿ ವಿರುದ್ಧ ಸೆಬಿ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಹಿಡನ್ ಬರ್ಗ ವರದಿ ನಂತರ ಅದಾನಿ ಸಮೂಹ ಸಂಸ್ಥೆಗಳ ಮೇಲೆ ಭಾರೀ ಪ್ರಮಾಣದಲ್ಲಿ ಹೂಡಿಕೆ ಮಾಡಿದ ರಿಲಾಯನ್ಸ್ ಕಂಪನಿಯ ಮುಕೇಶ್ ಅಂಬಾನಿ ವಿರುದ್ಧವೂ ತನಿಖೆಯಾಗಬೇಕು. ಅಂದಾಗ ಮಾತ್ರ ಭವಿಷ್ಯದಲ್ಲಿ ಷೇರುಮಾರುಕಟ್ಟೆ ಸುರಕ್ಷಿತ ಮತ್ತು ದೇಶದ ಆರ್ಥಿಕತೆ ಸುಭದ್ರವಾಗಿರಲು ಸಾಧ್ಯ.



ನರೇಗಲ್ಲ ಹಿರೇಮಠದಲ್ಲಿ ನೂತನವಾಗಿ ನಿರ್ಮಾಣಗೊಂಡ ಸದ್ಧರ್ಮ ಧಾಮ ಉದ್ಘಾಟನೆಯ ನಿಮಿತ್ತ ಹೋಮ-ಹವನಗಳು ಜರುಗಿದವು. ಹೋಮ ಹಾಗೂ ಗೋ ಪೂಜೆಯನ್ನು ಮಂಜುನಾಥ ಎಸ್.ಅಣಗೌಡ್ರ ದಂಪತಿಗಳು ನೆರವೇರಿಸಿದರು. ಈ ಸಂದರ್ಭದಲ್ಲಿ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಉಪಸ್ಥಿತರಿದ್ದು, ಹೋಮ ಕಾರ್ಯಗಳನ್ನು ನೆರವೇರಿಸಿದರು.

## ಮನೋರಮಾ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ




■ ವಿಜಯಸಾಕ್ಷಿ ಸುದ್ದಿ, ಗದಗ

ಆದರ್ಶ ಶಿಕ್ಷಣ ಸಮತಿಯ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಗದಗ ಜಿಲ್ಲಾ ವಲಯ ಮಟ್ಟದ ಎರಡು ದಿನಗಳ ಯುವಜನೋತ್ಸವದಲ್ಲಿ ಗದುಗಿನ ಮನೋರಮಾ ಕಾಲೇಜನ ವಿದ್ಯಾರ್ಥಿಗಳು ಉತ್ತಮ ಸಾಧನೆಗೈದಿದ್ದಾರೆ.

ಕಾಲೇಜಿನ ವಿದ್ಯಾರ್ಥಿಗಳಾದ ಕಂಗನ ಪವಾರ ಪಾಶ್ಚಾತ್ಯ ಗಾಯನದಲ್ಲಿ ಪ್ರಥಮ, ಮೆಹಂದಿ ಸ್ಪರ್ಧೆಯಲ್ಲಿ ಉಮ್ಮಿ ಜವೇರಿಯಾ ಪ್ರಥಮ, ಸಯ್ಯದಾ ತಂಜೀಮ್ ಖಾಜಿ ಭಾಷಣ ಸ್ಪರ್ಧೆಯಲ್ಲಿ ಪ್ರಥಮ, ಮೈಮ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳು ಇಂದ್ರಕುಮಾರ, ಅಭಿಷೇಕ, ಸಾಗರ, ಮೆಹಬೂಬ, ಅಮೋಘ, ಪುರುಷೋತ್ತಮ, ಜಾನಪದ ಹಾಡಿನಲ್ಲಿ ದ್ವಿತೀಯ ಸ್ಥಾನ ಪಡೆದ ಅನಿತಾ, ಪ್ರಮೋದಿನಿ, ತನುಜಾ, ಅಕ್ಷತಾ, ಶೃತಿ ಇವರಿಗೆ ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಹಾಗೂ ಗಣ್ಯಮಾನ್ಯರು ಪ್ರಶಸ್ತಿ ನೀಡಿ ಗೌರವಿಸಿದರು.

ಸಾಧನೆಗೈದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ ಹಾಗೂ ಕಾಲೇಜ ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವಿನಾ ಡಿ, ಪ್ರೊ. ಚೈತ್ರಾ ಡಿ ಸೇರಿದಂತೆ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ನವೆಂಬರ್ 26, 'ರಾಷ್ಟ್ರೀಯ ಸಂವಿಧಾನ ದಿನ'ದ ನಿಮಿತ್ತ ವಿಶೇಷ ಲೇಖನ

# ಇಂತಹ ಸಂವಿಧಾನ ಇನ್ನೆಲ್ಲೂ ಇಲ್ಲ!



ಭಾರತದ ಸಂವಿಧಾನವು ಒಂದು ಕನಸು, ದೂರದೃಷ್ಟಿ, ದೇಶದ ಜನತೆಗೆ ನೀಡಿದ ಭರವಸೆಗಳ ಗುಚ್ಛವಾಗಿದೆ. ಸಂವಿಧಾನವು ಯಾವುದೇ ಸಂಸ್ಥೆಯನ್ನು ಅಥವಾ ರಾಜಕೀಯ ಸಂಘಟನೆಯನ್ನು ಆಡಳಿತ ಮಾಡಲು ಬೇಕಾಗುವ ಆಯಕಟ್ಟು, ವಿಧಾನಗಳು ಮತ್ತು ಕಾನೂನುಗಳನ್ನು ನಿರೂಪಿಸುವ ವ್ಯವಸ್ಥೆ. ಸಾಮಾನ್ಯವಾಗಿ ಇದು ಲಿಖಿತ ರೂಪದಲ್ಲಿ ಇರುತ್ತದೆ. ಭಾರತ ಸಂವಿಧಾನವು ಜಗತ್ತಿನಲ್ಲಿನ ಅತಿ ದೊಡ್ಡ ಹಾಗೂ ಲಿಖಿತ ಸಂವಿಧಾನ ಎಂದು ಹೇಳಲಾಗುತ್ತದೆ.

ಒಂದು ದೇಶವು ಅನುಸರಿಸುವ ಮೂಲ ನಿಯಮಗಳ ಒಂದು ಗುಂಪನ್ನು ಸಂವಿಧಾನ ಎಂದು ಕರೆಯಲಾಗುತ್ತದೆ. ಪ್ರತಿಯೊಂದು ರಾಷ್ಟ್ರದ ಸರ್ಕಾರ ಮತ್ತು ಆಡಳಿತ ವ್ಯವಸ್ಥೆಯು ಕೆಲವೊಂದು ನಿಯಮ-ನಿಬಂಧನೆಗಳಿಗೆ ಅನುಗುಣವಾಗಿ ನಡೆಯಬೇಕು. ಇಂತಹ ನಿಯಮಗಳ ಸಮೂಹವೇ ಸಂವಿಧಾನ.

ಭಾರತೀಯ ಸಂವಿಧಾನದ ಇತಿಹಾಸ ಒಂದು ದೇಶದೊಡನೆ, ದೇಶದ ಜನರೊಡನೆ ಬೆಳೆದ ಸಂಕೀರ್ಣ ರಾಜಕೀಯ ಮತ್ತು ಸಾಮಾಜಿಕ ಮೌಲ್ಯಗಳನ್ನು ಯಶಸ್ವಿಯಾಗಿ ಭಟ್ಟಿ ಇಳಿಸಿದ ಸಾಧನೆಯ ಕಥೆಯ ಹೂರಣ. ಭಾರತದ ಸಂವಿಧಾನವು ಡಿಸೆಂಬರ್ 9, 1947ರಿಂದ ನವೆಂಬರ್ 26, 1949ರ ನಡುವೆ ರಚನೆಗೊಂಡಿತು. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ನೇತೃತ್ವದಲ್ಲಿ ರಚಿಸಲ್ಪಟ್ಟ ಭಾರತದ ಸಂವಿಧಾನವು ಜನವರಿ 26, 1950ರಂದು ಜಾರಿಗೆ ಬಂದಿತು. ಆದ್ದರಿಂದ ಭಾರತದಲ್ಲಿ ಪ್ರತಿವರ್ಷ ಜನವರಿ 26ರಂದು ಗಣರಾಜ್ಯೋತ್ಸವ ಆಚರಿಸಲಾಗುತ್ತದೆ. ಅಂತೆಯೇ, ನವೆಂಬರ್ 26ನ್ನು ಸಂವಿಧಾನ ದಿನ ಎಂದು ಆಚರಿಸಲಾಗುತ್ತಿದೆ.

ನಾಡಿನ ಮೂಲಭೂತ ನಿಯಮವಾಗಿ ಮಾಡಿದ ಹೆಮ್ಮೆಯ ಚರಿತ್ರೆ ಹೊಂದಿರುವ, ಭಾರತೀಯರಿಂದಲೇ ಭಾರತೀಯರಿಗಾಗಿ ನಿರ್ಮಿಸಿದ ಐತಿಹಾಸಿಕ ದಾಖಲೆ ನಮ್ಮ ಭಾರತದ ಸಂವಿಧಾನ. ಸಂವಿಧಾನ ರಚನಾ ಸಮಿತಿಯಲ್ಲಿ 284 ಮಂದಿ ಸದಸ್ಯರಿದ್ದರು. ಅವರಲ್ಲಿ 15 ಮಂದಿ ಮಹಿಳಾ ಸದಸ್ಯರಿದ್ದರು. ಅದರ ಕರಡನ್ನು 1949ರ ನವೆಂಬರ್ ತಿಂಗಳಿನಲ್ಲಿ ಸಲ್ಲಿಸಲಾಯಿತು. ಸಲ್ಲಿಸಿದ ಬಳಿಕವೂ ಸುಮಾರು 2 ವರ್ಷ 11 ತಿಂಗಳು 17 ದಿನಗಳ ಕಾಲ ನೂರಾರು ತಜ್ಞರು ಶ್ರಮವಹಿಸಿದ ಫಲವಾಗಿ ವಿಶ್ವದಲ್ಲೇ ಅತಿ ದೊಡ್ಡ ಲಿಖಿತ ಸಂವಿಧಾನ ಸಿದ್ಧವಾಗಿತ್ತು.

ಸಂವಿಧಾನ ಪೂರ್ಣಗೊಂಡ ದಿನವೇ 1949ರ ನವೆಂಬರ್ 26. ಇದಕ್ಕೆ 1930ರಲ್ಲಿ ಅಂದಿನ ಕಾಂಗ್ರೆಸ್‌ನ ಲಾಹೋರ್ ಅಧಿವೇಶನದಲ್ಲಿ ಪೂರ್ಣ ಸ್ವರಾಜ್ಯಕ್ಕೆ ಪಣ ತೊಡಲಾಯಿತು. ಆ ಐತಿಹಾಸಿಕ ದಿನ ಕೂಡ ನವೆಂಬರ 26ಆಗಿದೆ. ಇಡೀ ದೇಶಕ್ಕೆ ಅನ್ವಯವಾಗುವ ಸಂವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಗೆ ಒಂದು ಅರ್ಥವೂ ಬಂದಿತ್ತು. ಸಂವಿಧಾನ ರಚನಾ ಸಮಿತಿಯಲ್ಲಿದ್ದ ಎಲ್ಲ 284 ಮಂದಿ ಸದಸ್ಯರು 1950ರ ಜನವರಿ 24ರಂದು ಈ ದಾಖಲೆಗೆ ಸಹಿ ಮಾಡಿದರು. ಭಾರತದ ಸಂವಿಧಾನವನ್ನು ವಿಶ್ವದ ಅತ್ಯುತ್ತಮ ಸಂವಿಧಾನಗಳಲ್ಲಿ ಒಂದು ಎಂದು ಪರಿಗಣಿಸಲಾಗಿದೆ.

ಅಕ್ಟೋಬರ್ 12, 2015ರಂದು ಮುಂಬೈನಲ್ಲಿ ಅಂಬೇಡ್ಕರ್ ಸ್ಮಾರಕಕ್ಕೆ ಶಂಕುಸ್ಥಾಪನನೆ ಮಾಡುವಾಗ ಪ್ರಧಾನಿ ನರೇಂದ್ರ ಮೋದಿಯವರು, ನವೆಂಬರ್ 26ನ್ನು ದೇಶದ ಸಂವಿಧಾನ ದಿನವಾಗಿ ಆಚರಿಸುವಂತೆ ಮೊದಲ ಬಾರಿಗೆ ಘೋಷಿಸಿದ್ದರು. ಸಂವಿಧಾನದ ಮಹತ್ವವನ್ನು ಎಲ್ಲರಿಗೂ ತಿಳಿಸುವುದು ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದೊಂದಿಗೆ ಈ ನಿರ್ಧಾರ ಕೈಗೊಳ್ಳಲಾಗಿತ್ತು. ಅಂದಿನಿಂದ ಪ್ರತಿ ವರ್ಷವೂ ನ.26ರಂದು ದೇಶದ ಎಲ್ಲ ಶಾಲೆಗಳಲ್ಲಿ ಮಕ್ಕಳಿಗೆ ಸಂವಿಧಾನ ಹಾಗೂ ಅಂಬೇಡ್ಕರ್ ಬಗ್ಗೆ ಅರಿವು ನೀಡಲಾಗುತ್ತಿದೆ.

ಒಟ್ಟಾರೆಯಾಗಿ ಭಾರತದ ಸಂವಿಧಾನ ರಾಷ್ಟ್ರದ ಐಕ್ಯತೆಯ ಹೆಗ್ಗುರುತು. ಇಂದು ಭಾರತದ ಸಂವಿಧಾನ ದಿನ. ನಮ್ಮ ಸಂವಿಧಾನ ಇಡೀ ಪ್ರಪಂಚದಲ್ಲಿಯೇ ಒಂದು ಮಾದರಿಯಾಗಿದೆ. ರಾಷ್ಟ್ರದ ಎಲ್ಲ ಆಗುಹೋಗುಗಳೂ ಸಂವಿಧಾನವನ್ನು ಅನುಸರಿಸಿ ನಡೆಯುತ್ತವೆ. ಸಂವಿಧಾನವೇ ಭಾರತದ ಮೂಲಭೂತ ಹಾಗೂ ಪರಮೋಚ್ಚ ಕಾಯಿದೆಯೆಂದು ಭಾರತೀಯರು ಒಪ್ಪುತ್ತಾರೆ. ಸಂವಿಧಾನದ ಪಿತಾಮಹರೆನ್ನಿಸಿಕೊಳ್ಳುವ ಅಂಬೇಡ್ಕರರ ನುಡಿಗಳನ್ನು ಇಲ್ಲಿ ಸ್ಮರಿಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ.

ಹೀಗೆ ಸಂವಿಧಾನದ ಕುರಿತು ಹತ್ತು ಹಲವು ಕಾರ್ಯಕ್ರಮಗಳನ್ನು/ಯೋಜನೆಗಳನ್ನು ಹಾಕಿಕೊಂಡಾಗ ಮಾತ್ರ ನವೆಂಬರ್ 26ರ ಸಂವಿಧಾನ ದಿನಾಚರಣೆಗೆ ಮಹತ್ವ. ಸಂವಿಧಾನದ ಆಶಯಗಳಿಗೆ ಶೋಭೆ ತರುವ ಮೂಲಕ ನಾವು-ನೀವೆಲ್ಲರೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರದ ನಿರ್ದೇಶನದಂತೆ ನಡೆದುಕೊಳ್ಳೋಣ. ಸುಭದ್ರವಾದ, ಬಲಿಷ್ಠವಾದ, ಸಮೃದ್ಧವಾದ ರಾಷ್ಟ್ರ ನಿರ್ಮಾಣಕ್ಕಾಗಿ ಶ್ರಮಿಸೋಣ.



– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ ಶಿರಹಟ್ಟಿ, ಲಕ್ಷ್ಮೇಶ್ವರ.

#### ನಮ್ಮ ಸಂವಿಧಾನದ ವಿಶೇಷತೆ

* ನಮ್ಮ ಭಾರತದ ಸಂವಿಧಾನವನ್ನು ಟೈಪ್ ಮಾಡಿಲ್ಲ ಅಥವಾ ಮುದ್ರಣವನ್ನೂ ಮಾಡಿಲ್ಲ. ಅದನ್ನು ಇಂಗ್ಲೀಷ್ ಹಾಗೂ ಹಿಂದಿ ಭಾಷೆಯಲ್ಲಿ ಕೈಬರಹದ ರೂಪದಲ್ಲಿದೆ.
* ಭಾರತ ಸಂವಿಧಾನದ ಮೂಲ ಪ್ರತಿಗಳನ್ನು ವಿಶೇಷ ಹೀಲಿಯಂ ತುಂಬಿದ ಕವಚಗಳಲ್ಲಿ ಸಂರಕ್ಷಿಸಲಾಗಿದ್ದು, ಅದು ಭಾರತದ ಸಂಸತ್ ಭವನದ ಗ್ರಂಥಾಲಯದಲ್ಲಿದೆ.

### ವೀರೇಶ್ವರ ಪುಣ್ಯಾಶ್ರಮದಲ್ಲಿ ರಡ್ಡಿ ಸಮಾಜದಿಂದ ದೀಪೋತ್ಸವ

# ಮಲ್ಲಮ್ಮನವರು ತಾಳ್ಮೆಯ ಪ್ರತಿರೂಪ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಾಕಷ್ಟು ಕಷ್ಟ ಬಂದರೂ ಧೃತಿಗೆಡದೇ ಕಠೋರ ತಪಸ್ಸು ಮಾಡುವ ಮೂಲಕ ಶಿವನೊಲುಮೆಯನ್ನು ಪಡೆದು ಸಮಾಜದ ಉದ್ಧಾರಕ್ಕಾಗಿ ಬಾಳಿ ಬದುಕಿ ಇಡೀ ಮಾನವ ಕುಲಕ್ಕೆ ಮತ್ತು ಸರ್ವ ಸಮಾಜದ ಮಹಿಳೆಯರಿಗೆ ಮಾದರಿಯಾಗಿದ್ದಾಳೆ ಎಂದು ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ. ಕಲ್ಲಯ್ಯಜ್ಜನವರು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ವೀರೇಶ್ವರ ಪುಣ್ಯಾಶ್ರಮದಲ್ಲಿ ಗದಗ ಜಿಲ್ಲಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮ, ಶ್ರೀ ಮಹಾಯೋಗಿ ವೇಮನ ರಡ್ಡಿ ಸಮಾಜ ಸಂಘದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕಾರ್ತಿಕ ಮಾಸದ ದೀಪೋತ್ಸವವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದರು.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಸಮಾಜಕ್ಕೆ ಅಗಾಧವಾದ ಕೊಡುಗೆ ನೀಡಿದ್ದಾರೆ. ಅದನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಮಲ್ಲಮ್ಮನ ಕಾಯಕನಿಷ್ಠೆ, ದೈವಭಕ್ತಿ ಮತ್ತು ಆದರ್ಶಮಯ ಜೀವನದ ಬಲದಿಂದ ಇಂದು ನಾವು ನೀವೆಲ್ಲರೂ ನೆಮ್ಮದಿಯ ಬದುಕು ಕಟ್ಟಿಕೊಂಡಿದ್ದೇವೆ ಎಂದರು.



ಮಹಾಯೋಗಿ ವೇಮನ ಅವರು ತ್ಯಾಗ ಜೀವನ ನಡೆಸುವ ಮೂಲಕ ಹಾಗೂ ವಚನ ಸಾಹಿತ್ಯಕ್ಕೆ ಬಹು ದೊಡ್ಡ ಆದರ್ಶದ ಕೊಡುಗೆಯನ್ನು ನೀಡುವ ಮೂಲಕ ಸಮಾಜದ ಸನ್ಮಾರ್ಗಕ್ಕೆ ಕಾರಣರಾಗಿದ್ದಾರೆ ಎಂದು ಬಣ್ಣಿಸಿದರು. ಗದಗ ಜಿಲ್ಲಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮ, ಶ್ರೀ ಮಹಾಯೋಗಿ ವೇಮನ ರಡ್ಡಿ ಸಂಘ ಸಮಾಜಮುಖಿ, ಜನಮುಖಿಯಾಗಿ ಒಳ್ಳೆಯ ಕಾರ್ಯ ಮಾಡುತ್ತಿದೆ ಎಂದರಲ್ಲದೆ, ಸಮಾಜದ ಮುಂಚೂಣಿಯಲ್ಲಿರುವ ಹಿರಿಯರು, ಮಹಿಳೆಯರು, ಯುವಕರು ಸಮಾಜದ ಬಲವರ್ಧನೆಗೆ ಶ್ರಮಿಸುತ್ತಿರುವದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಎರಡೂ ಸಂಘಟನೆಯ ಪದಾಧಿಕಾರಿಗಳು, ಹಿರಿಯರು, ಮಹಿಳೆಯರು ಸಮಾಜಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ತತ್ವಾದರ್ಶಗಳು ಸಾರ್ವಕಾಲಿಕ ಶ್ರೇಷ್ಠವಾಗಿವೆ. ಮಲ್ಲಮ್ಮನವರು ತಾಳ್ಮೆಯ ಪ್ರತಿರೂಪ. ಸ್ತ್ರೀಯರು ತಾಳ್ಮೆಯಿಂದ ಇದ್ದರೆ ಸಾಧನೆ ಮಾಡಬಹದು ಎನ್ನುವುದಕ್ಕೆ ಹೇಮರೆಡ್ಡಿ ಮಲ್ಲಮ್ಮ ಸಾಕ್ಷಿ. ತಾಳ್ಮೆ ಜೀವನದಲ್ಲಿ ಅತೀ ಪ್ರಮುಖವಾಗಿದೆ. ಮಹಿಳೆಯರಿಗೆ ತಾಳ್ಮೆ ಇದ್ದರೆ ಅವರು ಇಡೀ ಕುಟುಂಬವನ್ನು ಚೆನ್ನಾಗಿ ನಿಭಾಯಿಸಲು ಸಾಧ್ಯವಾಗುತ್ತದೆ ಎಂದು ಡಾ. ಕಲ್ಲಯ್ಯಜ್ಜನವರು ಹೇಳಿದರು.

### ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಕ್ರಿಯಾಶೀಲ ಬದುಕು ಶ್ರೇಯಸ್ಸಿಗೆ ಅಡಿಪಾಯ

■ ವಿಜಯಸಾಕ್ಷಿ ಸುದ್ದಿ, ತರೀಕೆರೆ

ಮಾನವ ಜೀವನ ನಿಂತ ನೀರಾಗಬಾರದು. ಸದಾ ಹರಿಯುವ ಪವಿತ್ರ ಗಂಗಾಜಲವಾಗಬೇಕು. ಕಷ್ಟದ ಜೀವನ ಶಿಸ್ತನ್ನು ಕಲಿಸುವ ಪಾಠಶಾಲೆ. ಕ್ರಿಯಾಶೀಲ ಬದುಕು ಜೀವನದ ಶ್ರೇಯಸ್ಸಿಗೆ ಅಡಿಪಾಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಶುಕ್ರವಾರ ತಾಲೂಕಿನ ಹುಣಸಘಟ್ಟ ಹಾಲುಸ್ವಾಮಿ ಮಠದಲ್ಲಿ ಕಾರ್ತೀಕ ದೀಪೋತ್ಸವ ಹಾಗೂ ಗುರುಮೂರ್ತಿ ಶಿವಾಚಾರ್ಯರ 62ನೇ ಜನ್ಮ ದಿನೋತ್ಸವದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಬದುಕಿಗೆ ಭಗವಂತ ಕೊಟ್ಟ ಕೊಡುಗೆ ಅಪಾರ. ಸಾರ್ಥಕ ಬದುಕಿಗೆ ಧರ್ಮಾಚರಣೆಯ ಮೌಲ್ಯಗಳು ಅವಶ್ಯಕ. ಧರ್ಮದ ದಿಕ್ಸೂಚಿ ಇಲ್ಲದೆ ಇದ್ದರೆ ಜೀವನ ಬೆಳೆಯಲಾಗದು. ಧರ್ಮ ಅರ್ಥ ಕಾಮ ಮೋಕ್ಷ ಇವುಗಳಲ್ಲಿ ಒಂದನ್ನಾದರೂ ಸಾಧಿಸದಿದ್ದಲ್ಲಿ ಜೀವನ ಸಾರ್ಥಕಗೊಳ್ಳುವುದಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾನವ ಜೀವನ ವಿಕಾಸಕ್ಕಾಗಿ ನಿರೂಪಿಸಿದ ಅಹಿಂಸಾ, ಸತ್ಯ, ಅಸ್ತೇಯ ಬ್ರಹ್ಮಚರ್ಯ, ದಯಾ, ಕ್ಷಮಾ, ದಾನ, ಪೂಜಾ, ಜಪ ಮತ್ತು ಧ್ಯಾನ ಎಂಬ ದಶವಿಧ ಸೂತ್ರಗಳ ಪರಿಪಾಲನೆ ಬಹಳಷ್ಟು ಮುಖ್ಯ.



ಬಾಳಿಗೆ ಬೆಳಕು ಬೇಕು. ಬೆಳಕಿಲ್ಲದಿದ್ದರೆ ಬಾಳಲ್ಲಿ ಕತ್ತಲು ಆವರಿಸುತ್ತದೆ. ಹೊರಗಿನ ಕತ್ತಲೆಯನ್ನು ದೀಪದಿಂದ ಕಳೆಯಬಹುದು. ಒಳಗಿರುವ ಅಜ್ಞಾನ ಅನ್ನುವ ಕತ್ತಲೆಯನ್ನು ಕಳೆಯಲು ಗುರು ಮಾತ್ರ ಸಮರ್ಥನಾಗಿದ್ದಾನೆ. ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು 62ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿದ್ದಾರೆ. ಶ್ರೀಗಳವರ ಚಲನಶೀಲ ವ್ಯಕ್ತಿತ್ವ ಮಠದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ಭಕ್ತ ಸಂಕುಲದ ಪ್ರೀತ್ಯಾದರಗಳಿಗೆ ಪಾತ್ರರಾಗಿದ್ದಾರೆ ಎಂದು ಹರುಷ ವ್ಯಕ್ತಪಡಿಸಿದರು. ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನ ಮೌಲ್ಯಗಳನ್ನು ಸಂರಕ್ಷಿಸಿಕೊಂಡು ಬರುವ ಜವಾಬ್ದಾರಿ ಎಲ್ಲರ ಮೇಲೂ ಇದೆ. ಧಾರ್ಮಿಕ ಮೌಲ್ಯಗಳನ್ನು ನಿರ್ಲಕ್ಷ್ಯ ಮಾಡುವ ಕಾರಣ ಜನ ಸಮುದಾಯದಲ್ಲಿ ಹಲವಾರು ಸಮಸ್ಯೆಗಳು ತಲೆದೋರುತ್ತಿವೆ. ಗುರುಮೂರ್ತಿ ಶ್ರೀಗಳು ಶಿವಾಚಾರ್ಯ ಸಂಕುಲದಲ್ಲಿ ತನ್ನದೇ ಆದ ಸ್ಥಾನವನ್ನು ಹೊಂದಿ ಭಕ್ತರ ಬಾಳಿಗೆ ಬೆಳಕು ತೋರಿದ್ದಾರೆ. ಭಗವಂತ ಅವರಿಗೆ ಆರೋಗ್ಯ ಭಾಗ್ಯ ಕರುಣಿಸಲೆಂದರು. ಈ ಪವಿತ್ರ ಸಮಾರಂಭದಲ್ಲಿ ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶ್ರೀಗಳು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶ್ರೀಗಳು, ನಂದಿಪುರ ನಂದೀಶ್ವರ ಶ್ರೀಗಳು, ಬೀರೂರಿನ ರುದ್ರಮುನಿ ಶ್ರೀಗಳು, ಶಂಕರದೇವರ ಮಠದ ಚಂದ್ರಶೇಖರ ಶ್ರೀಗಳು, ಬಿಳಕಿ ಹಿರೇಮಠದ ರಾಚೋಟೇಶ್ವರ ಶ್ರೀಗಳು, ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶ್ರೀಗಳು, ತಾವರೆಕೆರೆ ಶಿಲಾಮಠದ ಡಾ.ಅಭಿನವ ಸಿದ್ಧಲಿಂಗ ಶ್ರೀಗಳು, ಹಾರನಹಳ್ಳಿ ಶಿವಯೋಗಿ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು, ಪ್ರತಿಯೊಬ್ಬರ ಬಾಳಿನಲ್ಲಿ ಜ್ಞಾನದ ಬೆಳಕು ಮೂಡಬೇಕು. ಯತಾರ್ಥವಾದ ಅರಿವನ್ನು ಹೊಂದಿ ಮಾನವ ಜೀವನ ಸಾರ್ಥಕಪಡಿಸಿಕೊಳ್ಳಬೇಕಾಗಿದೆ. ಇಂದು 62ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿದ ಸಂದರ್ಭದಲ್ಲಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳು ದಯಮಾಡಿಸಿ ಆಶೀರ್ವದಿಸಿದ್ದು ನಮ್ಮ ಸೌಭಾಗ್ಯ. ಮಹಾಗುರುವಿನ ಕೃಪಾಶೀರ್ವಾದದಿಂದ ಬಾಳ ಬದುಕು ವಿಕಾಸಗೊಳ್ಳಲೆಂದು ನುಡಿದರು.

# ಇಂದು 'ಸಂವಿಧಾನ ದಿನ' ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಾರ್ಥ ಶಿಕ್ಷಣ ಹಾಗೂ ಗ್ರಾಮೀಣ ಅಭಿವೃದ್ಧಿ ವಿವಿಧೋದ್ದೇಶಗಳ ಸಂಘ ಬೆಟಗೇರಿ ವತಿಯಿಂದ 26ರ ಮುಂಜಾನೆ 9 ಗಂಟೆಗೆ ಸಂವಿಧಾನ ದಿನ ಆಚರಿಸಲಾಗುತ್ತಿದೆ. ಗದಗ-ಬೆಟಗೇರಿ ನಗರಸಭೆ ಆಭರಣದಲ್ಲಿರುವ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಭಾರತದ ಸಂವಿಧಾನ ಪೀಠಿಕೆಯನ್ನು ಸಾಮೂಹಿಕವಾಗಿ ಓದುವುದು ಹಾಗೂ ಅದರ ವಿಶೇಷತೆ ಕುರಿತು ಉಪನ್ಯಾಸ ನೆರವೇರಲಿದೆ. ಸಂಘದ ಎಲ್ಲಾ ಪದಾಧಿಕಾರಿಗಳು ಪಾಲ್ಗೊಳ್ಳುವಂತೆ ಸಂಘದ ಗೌರವಾಧ್ಯಕ್ಷ ಸತೀಶ್ ಎಚ್.ಹೂಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ, ಬೆಂಗಳೂರ 2024-25ನೇ ಸಾಲಿನಲ್ಲಿ ಗಿರಿಜನ ಉಪಯೋಜನೆ (10+1) ಕುರಿ/ಮೇಕೆ ಸಾಕಾಣಿಕೆ ಯೋಜನೆಗಳ ಪರಿಶಿಷ್ಟ ಪಂಗಡಕ್ಕೆ ಗದಗ ಜಿಲ್ಲೆಗೆ 3 ಗುರಿಗಳಿದ್ದು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ.ಬೆಂಗಳೂರು ಇದರಲ್ಲಿ ನೋಂದಣಿಯಾದ ಗದಗ ಜಿಲ್ಲೆಯ ಚಾಲ್ತಿಯಲ್ಲಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಸದಸ್ಯತ್ವ ಹೊಂದಿರುವ 18ರಿಂದ 60 ವರ್ಷ ವಯೋಮಿತಿಯೊಳಗಿನ ಮಹಿಳಾ ಮತ್ತು ಪುರುಷ ಕುರಿ/ಮೇಕೆ ಸಾಕಾಣಿಕೆದಾರರು ಅರ್ಜಿಗಳನ್ನು ಡಿಸೆಂಬರ್ 10ರೊಳಗೆ ಆಯಾ ತಾಲೂಕಿನ ಸಹಾಯಕ ನಿರ್ದೇಶಕರುಗಳಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ. ಗದಗ, ಪಶು ಆಸ್ಪತ್ರೆ ಆವರಣ-ಗದಗ ಇವರನ್ನು ಕಛೇರಿಯ ವೇಳೆಯಲ್ಲಿ (ದೂರವಾಣಿ ಸಂ: 9480131475, 9663570842) ಸಂಪರ್ಕಿಸಲು ಕೋರಲಾಗಿದೆ.

### ಪುರಾಣ ಪ್ರವಚನ ಮಂಗಲ, ಸದ್ಧರ್ಮ ಧಾಮ ಉದ್ಘಾಟನಾ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಎಲ್ಲರಿಗಾಗಿ ಬಯಸುವುದೇ ದೇವಗುಣ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆದರ್ಶ ಚಿಂತನೆಗಳ ಅವಶ್ಯಕತೆಯಿದೆ. ಧರ್ಮ, ಸಂಸ್ಕೃತಿ ಮತ್ತು ಆಧ್ಯಾತ್ಮ ಚಿಂತನೆಗಳ ಅರಿವು ಅಗತ್ಯ. ತನಗಾಗಿ ಬಯಸುವುದು ಮನುಷ್ಯನ ಗುಣವಾದರೆ ಎಲ್ಲರಿಗಾಗಿ ಬಯಸುವುದು ದೇವಗುಣ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಶ್ರೀ ಹಿರೇಮಠದ ಸಭಾಭವನದಲ್ಲಿ ಜರುಗಿದ ಪುರಾಣ ಪ್ರವಚನ ಮಂಗಲ ಹಾಗೂ ಸದ್ಧರ್ಮ ಧಾಮ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಬಹು ಜನ್ಮದ ಪುಣ್ಯದ ಫಲದಿಂದಾಗಿ ಮಾನವರಾಗಿ ಜನಿಸಿ ಬಂದಿದ್ದೇವೆ. ಅರಿವುಳ್ಳ ಜನ್ಮದಲ್ಲಿ ಬಂದ ಬಳಿಕ ಸ್ವಲ್ಪಾದರೂ ಶಿವಜ್ಞಾನ ಪ್ರಾಪ್ತಿಗಾಗಿ ಮತ್ತು ಗುರು ಕಾರುಣ್ಯಕ್ಕಾಗಿ ಶ್ರಮಿಸಬೇಕಾಗುತ್ತದೆ. ಅಧಿಕಾರದ ಅಂತಸ್ತು ಮೇಲೇರಿದಂತೆ ನೀತಿಯ ಅಂತಸ್ತು ಮೇಲೇರಬೇಕು. ಮನುಷ್ಯನ ಬುದ್ಧಿಶಕ್ತಿ ಬೆಳೆದಷ್ಟು ಭಾವನೆಗಳು ಇಂದು ಬೆಳೆಯುತ್ತಿಲ್ಲ.



ಮಾತು, ಮನ, ಕೃತಿ ಒಂದಾದಾಗ ಬದುಕು ಸದೃಢಗೊಳ್ಳುತ್ತದೆ. ಬೆಳೆಯುವ ಯುವ ಜನಾಂಗದಲ್ಲಿ ಸಂಸ್ಕಾರ ಸದ್ವಿಚಾರಗಳನ್ನು ಬೆಳೆಸುವ ಕೆಲಸವಾಗಬೇಕಾಗಿದೆ. ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಸಮಾಜಮುಖಿಯಾಗಿ, ಧರ್ಮಮುಖಿಯಾಗಿ ಸದಾ ಶ್ರಮಿಸುತ್ತಿರುವ ಕಾರಣ ಶ್ರೀಮಠದ ಅಭಿವೃದ್ಧಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ನೇತೃತ್ವ ವಹಿಸಿದ ಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿ, ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯ. ಜಾತಿ ಧರ್ಮಗಳ ಸಂಘರ್ಷದಲ್ಲಿ ಆದರ್ಶ ಮೌಲ್ಯಗಳು ನಾಶಗೊಳ್ಳಬಾರದು ಎಂದರು.

ಸಮ್ಮುಖ ವಹಿಸಿದ್ದ ಅಬ್ಬಿಗೇರಿ-ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಮಾತನಾಡಿ, ಸಂಪತ್ತು ಬೆಳೆದಂತೆ ಸಭ್ಯತೆ ಸಂಸ್ಕೃತಿ ಮರೆಯಬಾರದು. ದೇವರು, ಧರ್ಮ, ಗುರುವನ್ನು ಆಶ್ರಯಿಸಿ ಆದರ್ಶ ಬದುಕು ಕಟ್ಟಿಕೊಳ್ಳಬೇಕೆಂದರು. ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು ಉಪಸ್ಥಿತರಿದ್ದರು.

ಇಳಕಲ್ಲ ಹಿರೇಮಠದ ಅನ್ನದಾನ ಶಾಸ್ತ್ರಿಗಳು ಪುರಾಣ ಮಂಗಲಗೊಳಿಸಿದರು. ಡಾ. ಕೆ.ಬಿ. ಧನ್ನೂರ, ವಿ.ಬಿ. ಸೋಮನಕಟ್ಟಿಮಠ, ಚಂದ್ರು ಬಾಳಿಹಳ್ಳಿಮಠ, ವೀರೇಶ ಕೂಗುಮಠ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಎಂ.ಎಸ್. ಧಡೇಸೂರಮಠ. ಬಸವರಾಜ ಕೊಳಕಣ್ಣವರ, ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರು ರಕ್ಷೆ ಸ್ವೀಕರಿಸಿದರು. ಹಿರೇಮಠದ ಸದ್ಭಕ್ತ ಮಂಡಳಿ, ಜಾತ್ರಾ ಮಹೋತ್ಸವ ಸಮಿತಿ, ಅನ್ನಪೂರ್ಣೇಶ್ವರಿ ಮಹಿಳಾ ಸಂಘ, ರೇಣುಕಾಚಾರ್ಯ ಶಿಕ್ಷಣ ಸಂಸ್ಥೆಯವರು ಕಾರ್ಯಕ್ರಮವನ್ನು ಸಂಘಟಿಸಿದ್ದರು. ಕೆ.ಎಸ್. ಕಳಕಣ್ಣವರ ನಿರ್ವಹಿಸಿದರು.

ಇದೇ ಸಂದರ್ಭದಲ್ಲಿ ಶಾಸಕ ಜಿ.ಎಸ್. ಪಾಟೀಲರ ವೈವಾಹಿಕ ಜೀವನದ ಸುವರ್ಣ ಮಹೋತ್ಸವ ಸಂದರ್ಭದಲ್ಲಿ ಪಾಟೀಲ ದಂಪತಿಗಳಿಗೆ ಆಶೀರ್ವಾದ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಆಶೀರ್ವಾದ ಸ್ವೀಕರಿಸಿ ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ, ಇದು ನನ್ನ ಜೀವನದ ಅಮೂಲ್ಯ ಕ್ಷಣ. ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಮಲ್ಲಿಕಾರ್ಜುನ ಶ್ರೀಗಳು ಆಶೀರ್ವಾದಕ್ಕೆ ಅವಕಾಶ ಕಲ್ಪಿಸಿಕೊಟ್ಟಿದ್ದು ನನ್ನ ಸೌಭಾಗ್ಯವೆಂದರು.

# ಡಿ. 3 ರಿಂದ 5 ರವರೆಗೆ ಎನ್‌ಎಸ್‌ವಿ ಶಸ್ತ್ರಚಿಕಿತ್ಸೆ ಕ್ಯಾಂಪ್

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕುಟುಂಬ ಕಲ್ಯಾಣ ವಿಭಾಗ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಡಿಸೆಂಬರ್ 3 ರಿಂದ 5 ರವರೆಗೆ ಎಲ್ಲಾ ತಾಲೂಕುಗಳ ತಾಲೂಕಾ ಆಸ್ಪತ್ರೆಯಲ್ಲಿ ಪುರುಷ ಸಂತಾನ ಹರಣ ಚಿಕಿತ್ಸೆಯ ಕ್ಯಾಂಪಗಳನ್ನು ಚಆಯೋಜಿಸಲಾಗಿದೆ. ಈ ಕ್ಯಾಂಪ್‌ನಲ್ಲಿ ತಮಗೆ ಇನ್ನು ಮುಂದೆ ಮಕ್ಕಳು ಬೇಡವೆಂದು ನಿರ್ಧರಿಸಿದ ಅರ್ಹ ದಂಪತಿಗಳು, ಪತ್ನಿಯು ಧೀರ್ಘಕಾಲಿಕ ಖಾಯಿಲೆಗಳಿಂದ ಬಳಲುತ್ತಿದ್ದರೆ ಅಥವಾ ಪತ್ನಿಗೆ 2 ರಿಂದ 3 ಬಾರಿ ಸಿಜೇರಿಯನ್ ಶಸ್ತ್ರಚಿಕಿತ್ಸೆಯಾಗಿದ್ದರೆ ಅಥವಾ ಪತ್ನಿಗೆ ಬೇರೆ ಯಾವುದಾದರೂ 2-3 ಬಾರಿ ಶಸ್ತ್ರಚಿಕಿತ್ಸೆಯಾಗಿದ್ದರೆ ಅಂತಹ ಪತ್ನಿಯ ಪತಿಯು ಎನ್,ಎಸ್,ವಿ ಶಸ್ತ್ರ ಚಿಕಿತ್ಸೆಯನ್ನು ಮಾಡಿಸಿಕೊಳ್ಳಬಹುದು. ಈ ಚಿಕಿತ್ಸೆಯು ಗಾಯವಿಲ್ಲದೆ ಹೊಲಿಗೆವಿಲ್ಲದೆ ಕೇವಲ 5 ರಿಂದ 10 ನಿಮಿಷದಲ್ಲಿ ಮುಗಿಯುತ್ತದೆ. ಪುರುಷರಿಗೆ ಇದು ಒಂದು ಸರಳ ಸುರಕ್ಷಿತ ಹಾಗೂ ಶಾಶ್ವತ ಕುಟುಂಬ ಯೋಜನೆಯ ವಿಧಾನವಾಗಿದೆ. ಅರ್ಹ ದಂಪತಿಗಳು ಈ ಒಂದು ಕುಟುಂಬ ಯೋಜನೆಯು ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ.13ರಂದು ನಡೆಯಲಿರುವ ಧಾರ್ಮಿಕ ಪ್ರವಚನದ ಪೋಸ್ಟರ್ ಬಿಡುಗಡೆ

# ಪೈಗಂಬರರ ಕೊಡುಗೆಗಳನ್ನು ಅರಿಯಬೇಕು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮುಹಮ್ಮದ್ ಪೈಗಂಬರ್ ಮನುಕುಲದ ಪ್ರವಾದಿಯಾಗಿ, ಶಾಂತಿದೂತರಾಗಿ ಜಗತ್ತಿಗೆ ನೀಡಿದ ಕೊಡುಗೆಗಳನ್ನು ನಾವಿಂದು ಅರ್ಥ ಮಾಡಿಕೊಳ್ಳಬೇಕಾಗಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಹಸನಸಾಬ ತಟಗಾರ ಹೇಳಿದರು.

ನಗರದ ರಾಜಾಬಕ್ಷಿ ದರ್ಗಾದ ಬುಕ್ಕಿಟಗಾರ ಹೊಲದಲ್ಲಿ ಡಿಸೆಂಬರ್ 13ರಂದು ನಡೆಯಲಿರುವ ಗೌಸೆ ಆಜಂ ಕಾನ್ಪರೆನ್ಸ್ ಧಾರ್ಮಿಕ ಪ್ರವಚನದ ಪೋಸ್ಟರ್ ಶಾದಿಮಹಲ್‌ನಲ್ಲಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಎಲ್ಲ ಧರ್ಮಗಳನ್ನು ಗೌರವಿಸುವ ಮೂಲಕ ಇವತ್ತು ಸುಂದರ ಸಮಾಜವನ್ನು ನಾವು ಕಟ್ಟಬೇಕಾಗಿದೆ. ಆ ನಿಟ್ಟಿನಲ್ಲಿ ಪಟ್ಟಣದಲ್ಲಿ ಐತಿಹಾಸಿಕ ಕಾರ್ಯಕ್ರಮಕ್ಕೆ ಅಣಿಯಾಗಿದ್ದೇವೆ ಎಂದರು. ಗೌಸೆ ಆಜಂ ಕಾನ್ಫರೆನ್ಸ್ ಕಮಿಟಿಯ ಸದಸ್ಯ ದಾವಲಸಾಬ ತಾಳಿಕೋಟಿ ಮಾತನಾಡಿ, ಈ ಕಾರ್ಯಕ್ರಮಕ್ಕೆ ಜಗತ್ತಿನ ಖ್ಯಾತ ವಾಗ್ಮಿಗಳು, ಪ್ರವಾದಿ ಮುಹಮ್ಮದ್ ಪೈಗಂಬರ್ ಅವರ ವಂಶಸ್ಥರಾದ ಉತ್ತರಪ್ರದೇಶದ ಸೈಯದ್ ಮುಹಮ್ಮದ್ ಹಾಷ್ಮಿ ಮಿಯಾ ಅವರು ಆಗಮಿಸಿ ಪ್ರವಾದಿಗಳ ಕುರಿತು ಪ್ರವಚನ ನೀಡಲಿದ್ದಾರೆ. ಇಂತಹ ದೊಡ್ಡ ಮಟ್ಟದ ಕಾರ್ಯಕ್ರಮ ಇತಿಹಾಸದಲ್ಲಿಯೇ ಮೊದಲಾಗಿದೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ನಗರದ ಹಾಗೂ ಸುತ್ತಮುತ್ತಲಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಲು ಕೋರಿದರು. ಧರ್ಮ ಗುರುಗಳಾದ ಯಾಸೀನ ಮೌಲಾನ ಮಾತನಾಡಿದರು. ಕಾರ್ಯಕ್ರಮದಲ್ಲಿ ಮೌಲಾನಾ ಖಲೀಲ ಅಹ್ಮದ ಖಾಜಿ, ರಫೀಕ್ ಮೌಲಾನ, ಕಾರ್ಯದರ್ಶಿ ಫಯಾಜ್ ತೋಟದ, ದಾದು ಹಣಗಿ, ನಾಸೀರ ಸುರುಪುರ, ಭಾಷಾ ಮುದಗಲ್ಲ, ಇಮ್ರಾನ್ ಅತ್ತಾರ, ಆರೀಫ್ ಮನಿಯಾರ, ಅಲಿ ಕಿಲ್ಲೆದಾರ, ಪಿ.ಕೆ. ಬಾಗವಾನ, ಎ.ಕೆ. ಕಾತರಕಿ, ಶಾಮೀದಸಾಬ ದಿಂಡವಾಡ, ರಸೂಲಸಾಬ ಆರಗಿದ್ದಿ, ಮೈಬುಸಾಬ ಚಿನ್ನೂರ, ಕೆ.ಸಿ. ಗೋಡೇಕಾರ, ಖಲಂದರ ಡಾಲಯತ, ಆಸೀಫ್, ಸಲೀಂ ಮಾನಿಯಾರ, ಸಲೀಂ ಕೊಪ್ಪಳ ಸೇರಿದಂತೆ ಸಮಾಜ ಭಾಂದವರು ಉಪಸ್ಥಿತರಿದ್ದರು.



ಗೌಸೆ ಆಜಂ ಕಮಿಟಿಯ ಹಣಕಾಸು ಸಮಿತಿ ಹಿರಿಯ ಸದಸ್ಯ ಎ.ಡಿ. ಕೋಲಕಾರ ಮಾತನಾಡಿ, ಡಿಸೆಂಬರ್ 13ರಂದು ಪಟ್ಟಣದಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮದಲ್ಲಿ ಸೈಯದ್ ಮುಹಮ್ಮದ್ ನೂರಾನಿ ಮಿಯಾ ಅವರು ಕನ್ನಡದಲ್ಲಿ ಪ್ರವಾದಿಗಳ ಕುರಿತು ಪ್ರವಚನ ನೀಡಲಿದ್ದು, ಸಮಾಜ ಭಾಂದವರು ತನು-ಮನ-ಧನದಿಂದ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಬೇಕು. 8-10 ಸಾವಿರ ಜನರು ಸೇರುವ ನಿರೀಕ್ಷೆಯಿದೆ ಎಂದರು.

# ಧರ್ಮ ಗ್ರಂಥಗಳ ಅಡ್ಡಪಲ್ಲಕ್ಕಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹಿರೇಮಠದಲ್ಲಿ ಸೋಮವಾರ ನಡೆದ ಜಾತ್ರಾ ಮಹೋತ್ಸವ, ಗುರು ಪರಂಪರೆ ಸ್ಮರಣೋತ್ಸವ ಹಾಗೂ 9 ದಿನಗಳಿಂದ ನಡೆದ ಹಾನಗಲ್ ಗುರು ಕುಮಾರ ಶಿವಯೋಗಿಗಳ ಪ್ರವಚನದ ಅಂಗವಾಗಿ ಶಿವಯೋಗಿ ಶಿವಾಚಾರ್ಯ ವಿರಚಿತ ಸಿದ್ಧಾಂತ ಶಿಖಾಮಣಿ ಗ್ರಂಥ, ವಚನಾಮೃತ ಗ್ರಂಥ ಹಾಗೂ ಹಿಂದಿನ ಗುರುಗಳ ಭಾವಚಿತ್ರದ ಅಡ್ಡಪಲ್ಲಕ್ಕಿ ಮಹೋತ್ಸವವು ವಿಜೃಂಭಣೆಯಿಂದ ಜರುಗಿತು.

ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಅಡ್ಡಪಲ್ಲಕ್ಕಿ ಮಹೋತ್ಸವಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಅಡ್ಡಪಲಕ್ಕಿಯು ಹಿರೇಮಠದಿಂದ ಪ್ರಾರಂಭವಾಗಿ ಗಣೇಶ ಗುಡಿ, ನಾಗರಕೆರೆ,



ಮಾರಿಕಾಂಬಾ ದೇವಸ್ಥಾನ, ಹಳೆ ಬಸ್ ನಿಲ್ದಾಣ, ಹೊಸ ಬಸ್ ನಿಲ್ದಾಣದ ಮೂಲಕ ಮರಳಿ ಹಿರೇಮಠದ ಆವರಣಕ್ಕೆ ಬಂದಿತು.

ಪಲ್ಲಕ್ಕಿ ಮುಂದೆ ಮಹಿಳೆಯರು ಕುಂಭವನ್ನು ಹೊತ್ತು ಸಾಗಿದರು. ಚಂಡೆ-ಮದ್ದಳೆ, ಕರಡಿ ಮಜಲು, ಡೊಳ್ಳು ಕುಣಿತ ಉತ್ಸವಕ್ಕೆ ಇನ್ನಷ್ಟು ಮೆರಗು ನೀಡಿದ್ದವು. ಸಾರೋಟಿನಲ್ಲಿ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ವಿರಾಜಮಾನರಾಗಿದ್ದರು. ನಂತರ ನೆರೆದ ಭಕ್ತರಿಗೆ ಅನ್ನಸಂತರ್ಪಣೆ ನೆರವೇರಿತು.

ನರೇಗಲ್ಲ ಸೇರಿದಂತೆ ದ್ಯಾಂಪೂರ, ಮಲ್ಲಾಪೂರ, ತೆ-ಊಟಗಂಟಿ, ಕೋಚಲಾಪೂರ, ಕೋಡಿಕೊಪ್ಪ, ಜಕ್ಕಲಿ, ಮಾರನಬಸರಿ, ಬೂದಿಹಾಳ, ನಿಡಗುಂದಿ, ನಿ.ಕೊಪ್ಪ, ಕೋಟುಮಚಗಿ ಹಾಗೂ ಅಬ್ಬಿಗೇರಿ ಗ್ರಾಮದ ಭಕ್ತರು ಉತ್ಸವದಲ್ಲಿ ಪಾಲ್ಗೊಂಡಿದ್ದರು.

# ಕುಸ್ತಿ ಪಂದ್ಯಾವಳಿಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಮಟ್ಟದ ಅಂತರ ಮಹಾವಿದ್ಯಾಲಯ ಪುರುಷ ಹಾಗೂ ಮಹಿಳಾ ಕುಸ್ತಿ ಪಂದ್ಯಾವಳಿಯಲ್ಲಿ ಸ್ಥಳೀಯ ಮನೋರಮಾ ಕಾಲೇಜಿನ ಬಿಸಿಎ ವಿಭಾಗದ ವಿದ್ಯಾರ್ಥಿನಿ ಪ್ರಿಯಾಂಕಾ ಕರಿಗಾರ ಮಹಿಳಾ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಸಾಧನೆಗೈದ ವಿದ್ಯಾರ್ಥಿನಿಗೆ ಹಾಗೂ ಕಾಲೇಜಿನ ದೈಹಿಕ ನಿರ್ದೇಶಕ ಖಯೂಮ ನವಲೂರ ಅವರಿಗೆ ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ,



ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಕಾಲೇಜಿನ ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವಿನಾ ಡಿ, ಪ್ರೊ. ಚೈತ್ರಾ ಡಿ, ಪ್ರೊ. ಶಾಹಿದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.


# ಸ್ತ್ರೀ ದೌರ್ಜನ್ಯ ತಡೆಯುವುದು ಎಲ್ಲರ ಜವಾಬ್ದಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಮಹಿಳೆಯರಿಗೆ ಗೌರಯುತವಾದ ಸ್ಥಾನವಿದ್ದು, ಇಂದು ಎಲ್ಲ ರಂಗಳಗಳಲ್ಲಿಯೂ ಮಹಿಳೆಯರು ಸಾಧನೆ ಮಾಡುತ್ತಿದ್ದಾರೆ. ಆದರೆ ಸಮಾಜದಲ್ಲಿ ನಡೆಯುವ ಮಹಿಳೆಯ ಮೇಲಿನ ದೌರ್ಜನ್ಯ ತಡೆಯುವುದು ಎಲ್ಲರ ಜವಾಬ್ದಾರಿಯಾಗಿದ್ದು, ಇದಕ್ಕಾಗಿ ವಿಶೇಷವಾದ ಕಾನೂನು ಸಹ ಇದೆ ಎಂದು ದಿವಾಣಿ ನ್ಯಾಯಾಧೀಶರಾದ ಸತೀಶ ಎಂ.ಹೇಳಿದರು.

ಅವರು ತಾಲೂಕಾ ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ ಶಿರಹಟ್ಟಿ ಮತ್ತು ಲಕ್ಷೇಶ್ವರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಶಿರಹಟ್ಟಿ ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಹಿರೇಬಣದ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರಿಗೆ ಅವರ



ಉದ್ಯೋಗ ಸ್ಥಳದಲ್ಲಿ, ಸಮಾಜದಲ್ಲಿ ದೌರ್ಜನ್ಯಗಳು ನಡೆಯುತ್ತವೆ. ಇದರಿಂದ ಮಹಿಳೆಯರು ಮಾನಸಿಕವಾಗಿ ಕುಗ್ಗುವದುಂಟು. ಆದರೆ ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯಗಳ ತಡೆಗಾಗಿಯೇ ವಿಶೇಷ ಕಾನೂನುಗಳಿದ್ದು, ಮಹಿಳೆಯರ ಮೇಲೆ ದೌರ್ಜನ್ಯ ನಡೆದ ಬಗ್ಗೆ ದೂರುಗಳು ಬಂದಲ್ಲಿ ಕಾನೂನು ಅಂತವರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳುತ್ತದೆ. ಸಮಾಜದಲ್ಲಿ ಮಹಿಳೆಯರನ್ನು ಸಮಾನತೆಯಿಂದ ನೋಡುವದು ಅವಶ್ಯವಾಗಿದೆ. ಇಂತಹ ಸಮಸ್ಯೆಗಳನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು. ಮಹಿಳೆಯರನ್ನು ಗೌರವಿಸುವ ಮೂಲಕ ಅವರಿಗೆ ಸೂಕ್ತ ಅವಕಾಶ, ಸ್ವಾತಂತ್ರ್ಯ, ಗೌರವ ನೀಡುವ ಕಾರ್ಯವಾದರೆ ಮಾತ್ರ ದೌರ್ಜನ್ಯದ ಪ್ರಕರಣಗಳು ಕಡಿಮೆಯಾಗುತ್ತವೆ ಎಂದು ಹೇಳಿದರು.

ಸಹಾಯಕ ಸರ್ಕಾರಿ ಅಭಿಯೋಜಕಿ ಹೀನಾಕೌಸರ ಗಂಜಿಹಾಳ ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿ.ಡಿ.ಪಿ.ಓ. ಮೃತ್ಯುಂಜಯ ಗುಡ್ಡದಾನ್ವೇರಿ ವಹಿಸಿದ್ದರು. ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ,. ಪ್ಯಾನಲ್ ವಕೀಲರಾದ ಪಿ.ಎಂ. ವಾಲಿ, ವಿ.ಎಸ್. ಪಶುಪತಿಹಾಳ, ಆರ್.ಎಂ. ಕುರಿ ಪಾಲ್ಗೊಂಡಿದ್ದರು. ಅಂಗನವಾಡಿ ಮೇಲ್ವಿಚಾರಕಿ ನಂದಾ ನವಲೆ ಕಾರ್ಯಕ್ರಮ ನಿರ್ವಹಿಸಿದರು.

# ಧಾರ್ಮಿಕ ಚಿಂತನೆಗಳು ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಪ್ರಸಕ್ತ ದಿನಗಳಲ್ಲಿ ಧಾರ್ಮಿಕ ಚಿಂತನೆಗಳು ಅಗತ್ಯವಾಗಿದ್ದು, ಈ ದಿಶೆಯಲ್ಲಿ ಗ್ರಾಮದಲ್ಲಿ ನಡೆಯುತ್ತಿರುವ ಧಾರ್ಮಿಕ ಪ್ರವಚನ ಸಹಕಾರಿಯಾಗಿದೆ. ಎಲ್ಲೆಡೆ ಧಾರ್ಮಿಕ ಕಾರ್ಯಗಳು ಹಾಗೂ ಚಿಂತನೆಗಳು ನಡೆಯಬೇಕು. ಅಂದಾಗ ಮಾತ್ರ ಗ್ರಾಮಗಳು ಸುಧಾರಣೆಯಾಗಲು ಸಾಧ್ಯವಾಗುತ್ತದೆ ಎಂದು ಕೃ.ಪ.ಸ.ಸಂಘದ ಅಧ್ಯಕ್ಷ ಶ್ರೀಕಾಂತ ಕುಲಕರ್ಣಿ ಹೇಳಿದರು.

ಅವರು ರವಿವಾರ ಸಂಜೆ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಧಾರ್ಮಿಕ ಪ್ರವಚನದ ಕಾರ್ಯಕ್ರಮದಲ್ಲಿ ಬ, ಾ ಗ ೆ ವ ೆ ಹಿ ಸಿ ಮಾತನಾಡಿದರು.



ಪ್ರೊ. ಎಫ್.ಎಂ. ಹುಡೇದ ಹಾನಗಲ್ಲ ಕುಮಾರೇಶ್ವರರ ಕುರಿತು ಉಪನ್ಯಾಸ ನೀಡಿದರು. ಶಾಂತಮ್ಮ ಮರಾಠ ಅಧ್ಯಕ್ಷತೆ ವಹಿಸಿದ್ದರು. ಶಿವಮೂರ್ತಿ ಶ್ರೀಗಳು ಸಾನ್ನಿಧ್ಯ ಹಾಗೂ ಶಿವಯೋಗಿ ದೇವರು ಸಮ್ಮುಖ ವಹಿಸಿದ್ದರು. ಗದಿಗೆಯ್ಯ ದೇವರು ವಿರಕ್ತಮಠ ಪ್ರವಚನ ನೀಡಿದರು. ದಾಸೋಹ ಸೇವೆ ಸಲ್ಲಿಸಿದ ಮರಿಯಮ್ಮ ಅಯ್ಯಪ್ಪ ಹಾದಿಮನಿರವರನ್ನು ಸನ್ಮಾನಿಸಲಾಯಿತು.

ಪತ್ರಕರ್ತ ಮೆಹೆಬೂಬ ಮೋತೆಖಾನ್, ಎಸ್‌ಡಿಎಂಸಿ ಅಧ್ಯಕ್ಷ ಕೂಡ್ಲೆಪ್ಪ ಹಡಪದ, ಗ್ರಾ.ಪಂ ಸದಸ್ಯರಾದ ದಿಲ್‌ಶ್ಯಾದಬೇಗ ಂ ದೋಟಿಹಾಳ, ಹನಮವ್ವ ತಳವಾರ, ನ್ಯಾಯವಾದಿ ಭರತಕುಮಾರ ಹಾದಿಮನಿ, ನಿವೃತ್ತ ಶಿಕ್ಷಕ ಎಸ್.ಬಿ. ಪೂಜಾರ, ಚಂದ್ರಶೇಖರಯ್ಯ ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


**ಲಕ್ಕುಂಡಿ ಅನ್ವೇಷಣೆಯಲ್ಲಿ 600ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳು ಲಭ್ಯ: ಸಚಿವ ಎಚ್.ಕೆ. ಪಾಟೀಲ**

# ಸ್ಮಾರಕಗಳ ಸಂರಕ್ಷಣಾ ಕಾರ್ಯ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿಯಲ್ಲಿ ಜರುಗುತ್ತಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆಯಲ್ಲಿ 5 ಬಾವಿ ಹಾಗೂ 5ಶಾಸನಗಳು ಸೇರಿದಂತೆ 600ಕ್ಕೂ ಅಧಿಕ ಪ್ರಾಚ್ಯಾವೇಶಗಳು ಲಭ್ಯವಾಗಿವೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಲಕ್ಕುಂಡಿ ಗ್ರಾಮದಲ್ಲಿ ಭಾನುವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಸಚಿವರು, ಲಕ್ಕುಂಡಿಯನ್ನು ರಾಷ್ಟ್ರಕೂಟರ ಕಾಲದಲ್ಲಿ ಕಟ್ಟಿದ್ದಾರೆ. ಕಲ್ಯಾಣ ಚಾಲುಕ್ಯರ ಕಾಲದಲ್ಲಿ ವಿಶೇಷ ಅಭಿವೃದ್ಧಿ ಹೊಂದಿ ಹೊಯ್ಸಳರು, ಕೆಲವು ಕಾಲ ವಿಜಯನಗರದ ಅರಸರೂ ಆಳಿದ್ದಾರೆ. ಇಂದು ಪ್ರಾಚ್ಯಾವಶೇಷಗಳ ಅನ್ವೇಷಣೆ ಸಂಗ್ರಹಣೆ ಕೆಲಸ ವಿಶೇಷ ಪ್ರಯತ್ನವಾಗಿದ್ದು ಸಾಂಸ್ಕೃತಿಕ, ಐತಿಹಾಸಿಕ, ಕಾಂತ್ರಿಕಾರಕ ಹೆಜ್ಜೆಯಾಗಿದೆ ಎಂದರು.



ಲಕ್ಕುಂಡಿಯಲ್ಲಿ ಈ ಹಿಂದೆ ಇದ್ದ 101 ದೇವಾಲಯಗಳಲ್ಲಿ ಇಂದು 50–60 ಲಭ್ಯವಾಗಿದೆ ಹಾಗೂ 8–10 ದೇವಾಲಯದ ಪಾಯಗಳು ದೊರಕಿವೆ. ಇನ್ನುಳಿದ ದೇವಾಲಯಗಳು ಎಲ್ಲೆಲ್ಲಿ ಇದ್ದವು ಎಂದು ಗುರುತಿಸುವದು ಬಹುದೊಡ್ಡ ಕೆಲಸವಾಗಿದೆ. ಹುದುಗಿಹೋದ ದೇವಾಲಯಗಳಲ್ಲಿ ಮರುಸೃಷ್ಟಿಸಬಹುದಾದ ದೇವಾಲಯ ಬಗ್ಗೆ ತಜ್ಞರು ಗಂಭೀರ ಆಲೋಚನೆ ಮಾಡುತ್ತಿದ್ದಾರೆ ಎಂದರು.

ಅನ್ವೇಷಣೆ ಸಂದರ್ಭದಲ್ಲಿ 5 ಹಳೆ ಬಾವಿಗಳು ಹೊಸದಾಗಿ ಸಿಕ್ಕಿದೆ ಹಾಗೂ 5 ಶಾಸನಗಳು ಲಭ್ಯವಾಗಿವೆ. ಅದರಲ್ಲಿ 3 ಶಾಸನಗಳು ಸಂಪೂರ್ಣ ಅಪ್ರಕಟಿತವಾಗಿದೆ. 2 ಅಪ್ರಕಟಿತವಾಗಿದೆ. ಈ ಕಾರ್ಯ ಎಲ್ಲರಲ್ಲೂ ಹುಮ್ಮಸ್ಸು ಹೆಚ್ಚಿಸಿದೆ. ಸರ್ಕಾರದ ಈ ಕೆಲಸದಿಂದ ಇತಿಹಾಸವಿರುವ ಗ್ರಾಮಗಳಲ್ಲಿ ಯಾವ ರೀತಿ ಕಾರ್ಯ ಕೈಗೊಳ್ಳಬಹುದು ಎನ್ನುವುದರ ಬಗ್ಗೆ ದಿಕ್ಸೂಚಿ ಸಿಕ್ಕಂತಾಗಿದೆ ಎಂದು ಹೇಳಿದರು.

ಇಂದು 13 ಗುಡಿಗಳನ್ನು ರಕ್ಷಿತ ಸ್ಮಾರಕ ಎಂದು ಘೋಷಿಸಲು ಸರ್ಕಾರ ನಿರ್ಣಯ ಕೈಗೊಂಡಿದೆ ಹಾಗೂ 1 ಮಠದಲ್ಲಿ ವಾಸ ಮಾಡುತ್ತಿರುವ ಮಾಲಿಕರು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಿಗೆ ಬಿಟ್ಟುಕೊಟ್ಟಿದ್ದಾರೆ. ಸ್ವ ಇಚ್ಛೆಯಿಂದ ಬಿಟ್ಟುಕೊಟ್ಟ ಅವರಿಗೆ ಸರ್ಕಾರದಿಂದ ವಿಶೇಷ ಗೌರವ ನೀಡಲಾಗಿದೆ ಎಂದರು.

13 ಸ್ಮಾರಕಗಳ ಸಂರಕ್ಷಣಾ ಕಾರ್ಯ ಪ್ರಾರಂಭವಾಗಿದೆ. ಮೊದಲು ಭೂಮಿಯ ಮೇಲ್ಭಾಗದಲ್ಲಿ ಲಭ್ಯವಿರುವ ಸ್ಮಾರಕಗಳನ್ನು ಸಂಗ್ರಹಿಸುಲಾಗುತ್ತದೆ. ಆನಂತರ ಡಿಸೆಂಬರ್ ಅಂತ್ಯದ ಒಳಗೆ ಉತ್ಖನನ ಕೆಲಸ ಪ್ರಾರಂಭಿಸಲಾಗುತ್ತದೆ ಹಾಗೂ ಕೋಟೆಯನ್ನು ಅಭಿವೃದ್ಧಿಪಡಿಸಿ ಲಕ್ಕುಂಡಿಯನ್ನು ಪ್ರವಾಸೋದ್ಯಮ ತಾಣವನ್ನಾಗಿಸಿ, ಇತಿಹಾಸವನ್ನು ತಿಳಿಯಲು ಬರುವವರಿಗೆ ಶ್ರೇಷ್ಠ ಕೇಂದ್ರವನ್ನಾಗಿಸಿ, ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯದಿಂದ ಲಕ್ಕುಂಡಿಯನ್ನು ಯುನೆಸ್ಕೋ ಪಟ್ಟಿಗೆ ಸೇರಿಸಲು ಪ್ರಯತ್ನ ಸಾಗಲಿದೆ ಎಂದು ತಿಳಿಸಿದರು.

ಶಾಸಕರಾದ ಸಿ.ಸಿ. ಪಾಟೀಲ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿಯ ಸದಸ್ಯ ಸಿದ್ಧಲಿಂಗೇಶ್ವರ ಎಚ್.ಪಾಟೀಲ ಸೇರಿದಂತೆ ಇತರ ಅಧಿಕಾರಿಗಳು ಹಾಜರಿದ್ದರು.

## 1050 ಪ್ರಾಚ್ಯಾವಶೇಷಗಳು ಪತ್ತೆ

ಲಕ್ಕುಂಡಿಯಲ್ಲಿ ನಡೆದ ಪ್ರಾಚ್ಯಾವಶೇಷ ಅನ್ವೇಷಣೆಯಲ್ಲಿ ಸಾಯಂಕಾಲದ ವೇಳೆಗೆ 13 ಶಾಸನ ಸೇರಿದಂತೆ ಒಟ್ಟಾರೆ 1050 ಪ್ರಾಚ್ಯಾವಶೇಷಗಳು ಪತ್ತೆಯಾಗಿವೆ. ಇವುಗಳಲ್ಲಿ ಪ್ರಮುಖವಾಗಿ ಗತಕಾಲದ ನಾಣ್ಯಗಳು, ದೇವರ ಮೂರ್ತಿಗಳು, ಶಿಲ್ಪ ಕಲೆ, ಶಿಲಾಮಂಟಪ ಅವಶೇಷಗಳು ಹಾಗೂ ಶಿಲಾಯುಗದ ಹಲವಾರು ಪಳವಳಿಕೆಗಳು ದೊರೆತಿವೆ. 3500 ವರ್ಷಗಳ ಹಿಂದಿನ ಶಿಲಾಯುಗದ ಕಲ್ಲಿನ ಆಯುಧ ಪತ್ತೆಯಾಗಿರುವುದು ವಿಶೇಷವಾಗಿದೆ.

ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ಕೆ ಜನಪದ ಕಲಾತಂಡ, ಪೊಲೀಸ್ ಬ್ಯಾಂಡ್ ಮೆರಗು ನೀಡಿತು. ಜೊತೆಗೆ ಗ್ರಾಮದ ಮಹಿಳೆಯರು ಸ್ವಯಂ ಪ್ರೇರಿತರಾಗಿ ಪೂರ್ಣ ಕುಂಭದೊಂದಿಗೆ ಪ್ರಮುಖ ಬೀದಿಗಳಲ್ಲಿ ಸಾಗಿದರು. ಜನಪ್ರತಿನಿಧಿಗಳು ಹಾಗೂ ಅಧಿಕಾರಗಳ ಅನ್ವೇಷಣೆಯ ಪ್ರತಿ ತಂಡಕ್ಕೆ ಒಂದೊಂದು ಕಲಾ ತಂಡ ಇದ್ದು, ಪ್ರಾಚ್ಯಾವಶೇಷಗಳಿಗೆ ವಿಶೇಷ ಆತಿಥ್ಯದೊಂದಿಗೆ ಸಂಗ್ರಹಿಸುವ ಕಾರ್ಯ ಭರದಿಂದ ಸಾಗಿತು.







# ಸಾಮೂಹಿಕ ಅಯ್ಯಾಚಾರ, ಲಿಂಗ ದೀಕ್ಷೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಅಯ್ಯಾಚಾರ ಸಂಸ್ಕಾರ ಮತ್ತು ಲಿಂಗ ದೀಕ್ಷೆಯ ಸಂಸ್ಕಾರದಿಂದ ಮಾತ್ರ ಉಜ್ವಲ ಭವಿಷ್ಯ ನಿರ್ಮಾಣ ಸಾಧ್ಯವಿದೆ. ಹೀಗಾಗಿ ವೀರಶೈವ ಲಿಂಗಾಯತ ಸಮಾಜದವರು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ಕೊಡಬೇಕು ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಪಟ್ಟಣದ ಹಿರೇಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಶ್ರೀಮಠದಲ್ಲಿ ಹಮ್ಮಿಕೊಂಡಿದ್ದ ಜಂಗಮ ವಟುಗಳಿಗೆ ಅಯ್ಯಾಚಾರ(ಶಿವದೀಕ್ಷೆ), ವೀರಶೈವರಿಗೆ ಲಿಂಗ ದೀಕ್ಷೆ ನೀಡಿ ಅವರು ಆಶೀರ್ವಚನ ನೀಡಿದರು.

ಮಕ್ಕಳಿಗೆ ಬಾಲ್ಯದಿಂದಲೇ ಧರ್ಮಾಚರಣೆಗಳ ಬಗ್ಗೆ ತಿಳುವಳಿಕೆ ನೀಡುವ ಕಾರ್ಯವಾಗಬೇಕು. ಮಕ್ಕಳಿಗೆ ಧರ್ಮದ ಮಾರ್ಗ ತೋರಬೇಕು. ಆಧುನಿಕ ಯುಗದಲ್ಲಿ ಸನಾತನ ಧರ್ಮ, ಪರಂಪರೆಯನ್ನು ಮರೆಯುತ್ತಿರುವುದು ಕಳವಳಕಾರಿ. ಸಂಸ್ಕಾರಕ್ಕೆ ಒತ್ತು ಕೊಡದಿದ್ದರೆ ಪ್ರತಿ ಓಣಿಯಲ್ಲೂ ವೃದ್ಧಾಶ್ರಮಗಳು ತಲೆ ಎತ್ತುವ ದಿನಗಳು ದೂರವಿಲ್ಲ. ಜಂಗಮರು ತಮ್ಮ ಮಕ್ಕಳಿಗೆ ಅಯ್ಯಾಚಾರ ದೀಕ್ಷೆ ಕೊಟ್ಟು, ಸಮಾಜಕ್ಕೆ ಸಂಸ್ಕಾರ ನೀಡಲು ಮುಂದೆ ಬರಬೇಕು ಎಂದರು. ದೀಕ್ಷೆ ಪಡೆದ ವಟುಗಳಿಗೆ ಚಿದಾನಂದಯ್ಯ ಹಿರೇಮಠ, ಗುರುಪಾದಯ್ಯ ಪ್ರಭುಸ್ವಾಮಿಮಠ ಹಾಗೂ ರುದ್ರಯ್ಯ ಸೊಬರದಮಠ ಪೂಜಾ ವಿಧಿ–ವಿಧಾನಗಳನ್ನು ಹೇಳಿಕೊಟ್ಟರು. ಅಯ್ಯಾಚಾರ ದೀಕ್ಷೆ ಪಡೆದ 6 ಜನ ಜಂಗಮ ವಟುಗಳು ಹಾಗೂ 10 ಜನ ಭಕ್ತರು ಲಿಂಗದೀಕ್ಷೆ ಪಡೆದರು. ರುದ್ರಮುನಿ ಶಾಸ್ತ್ರಿಗಳು ಹಿರೇಮಠ, ನಿಂಗಪ್ಪ ಕಣವಿ, ಮಲ್ಲಯ್ಯ ಕೋರಧಾನ್ಯಮಠ, ನಿರ್ಮಲಾ ಹಿರೇಮಠ, ಸದಾಶಿವ ಹಿರೇಮಠ, ಪ್ರಶಾಂತ ಹಿರೇಮಠ ಮುಂತಾದವರಿದ್ದರು.

# ಶೂಟಿಂಗ್‌ನಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಹಾಗೂ ಬೆಂಗಳೂರಿನ ಶೇಷಾದ್ರಿಪುರಂ ಪದವಿಪೂರ್ವ ಕಾಲೇಜುಗಳ ಸಂಯುಕ್ತಾಶ್ರಯದಲ್ಲಿ ನ.21 ಹಾಗೂ 22ರಂದು ಜರುಗಿದ ರಾಜ್ಯ ಮಟ್ಟದ ಶೂಟಿಂಗ್ ಕ್ರೀಡಾಕೂಟಕ್ಕೆ ಇಲ್ಲಿನ ಸನ್ಮಾರ್ಗ ಕಾಲೇಜಿನ ಮನ್ವಿತಾ ಬಡ್ನಿ ಹಾಗೂ ಅಮೃತಾ ಕಬಾಡಿ ಆಯ್ಕೆಯಾಗಿದ್ದಲ್ಲದೇ, ಮನ್ವಿತಾ ಬಡ್ನಿ ಏರ್ ರೈಫಲ್ ಪಿಪ್ ಸೈಟ್ ಶೂಟಿಂಗ್ ಸ್ಪರ್ಧೆಯಲ್ಲಿ ಕಂಚಿನ ಪದಕ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ.




ಸಾಧಕ ವಿದ್ಯಾರ್ಥಿಗಳಿಗೆ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಪದಾಧಿಕಾರಿಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿವೃಂದದವರು ಶುಭ ಹಾರೈಸಿದ್ದಾರೆ.

**ಕೃಷಿ ಇಲಾಖೆಯ ವತಿಯಿಂದ ಸಾರ್ವಜನಿಕರಿಗಾಗಿ ವಿಶೇಷ ಕಾರ್ಯಕ್ರಮ**

# ಸಿರಿಧಾನ್ಯ, ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಿರಿಧಾನ್ಯ ಮತ್ತು ಸಾವಯವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ2025ರ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ 'ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆ'ಯನ್ನು ಕೃಷಿ ಇಲಾಖೆಯ ವತಿಯಿಂದ ಡಿಸೆಂಬರ್ 6ರಂದು ಬೆಳಿಗ್ಗೆ 11 ಗಂಟೆಗೆ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿಗಳನ್ನು ಹೊರತುಪಡಿಸಿ ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ.



ಸಿರಿಧಾನ್ಯದ ಸಿಹಿ ಖಾದ್ಯಗಳು, ಸಿರಿಧಾನ್ಯದ ಖಾರದ ಖಾದ್ಯಗಳು, ಮರೆತು ಹೋದ ಖಾದ್ಯಗಳು ಹೀಗೆ ಒಟ್ಟು ಮೂರು ವಿಭಾಗದಲ್ಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಒಬ್ಬರಿಗೆ ಒಂದೇ ವಿಭಾಗದಲ್ಲಿ ಒಂದೇ ಸಸ್ಯಾಹಾರಿ ತಿನಿಸುಗಳು ಮಾತ್ರ ಮನೆಯಲ್ಲಿಯೇ ತಯಾರಿಸಿ ಪ್ರದರ್ಶಿಸಲು ಅವಕಾಶವಿರುತ್ತದೆ.

ಸಿರಿಧಾನ್ಯಗಳಾದ ಜೋಳ, ರಾಗಿ, ನವಣೆ, ಸಜ್ಜೆ, ಹಾರಕ, ಬರಗು ಮತ್ತು ಸಾಮೆ ಬೆಳೆಗಳಿಂದ ಸಿಹಿ ಮತ್ತು ಖಾರದ ಖಾದ್ಯವನ್ನು ತಯಾರಿಸುವುದು. ಮರೆತು ಹೋದ ಖಾದ್ಯಗಳು ರೈತರ ಸಾಂಪ್ರದಾಯಿಕ ಪರಂಪರೆ, ಜಾನಪದ ಪ್ರಭೇದಗಳು ಎಂದು ಕರೆಯಲ್ಪಡುವ ದೇಸಿ ತಳಿಗಳು, ಸ್ಥಳೀಯ ಅಥವಾ ಸಾಂಪ್ರದಾಯಕ ಕೃಷಿ ಪದ್ಧತಿಯಿಂದ ಅಭಿವೃದ್ದಿ/ನಿರ್ವಹಿಸಲ್ಪಡುವ ವಿಶಿಷ್ಟ ಗುಣಲಕ್ಷಣಗಳು, ಪೋಷಕಾಂಶಗಳಲ್ಲಿ ಸಮೃದ್ಧ ಮತ್ತು ಭೌಗೋಳಿಕ ಮೂಲಗಳ ಕಾರಣದಿಂದ ಕೆಲವೇ ರೈತರು ಬೆಳೆಯುವ ದೇಸಿ ತಳಿಗಳಿಂದ ತಯಾರಿಸುವ ಖಾದ್ಯಗಳು (ಸಿರಿಧಾನ್ಯಗಳನ್ನು ಹೊರತು ಪಡಿಸಿ ಇತರೆ ದೇಸಿ ತಳಿಗಳಡಿ ಬರುವ ಆಹಾರ ಮತ್ತು ಎಣ್ಣೆಕಾಳು ಬೆಳೆಗಳ, ತರಕಾರಿ ಮತ್ತು ಹಣ್ಣುಗಳ ಇತ್ಯಾದಿ ಖಾದ್ಯಗಳನ್ನು ತಯಾರಿಸುವುದು.)

ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತಿ ಇರುವವರು ತಮ್ಮ ಹೆಸರು, ವಿಳಾಸ, ಫೋಟೋ, ಭಾಗವಹಿಸುವ ವಿಭಾಗ (ಸಿಹಿ, ಖಾರ, ಮರೆತು ಹೋದ ಖಾದ್ಯ), ಬೇಕಾಗುವ ಸಾಮಗ್ರಿಗಳು ಹಾಗೂ ತಯಾರಿಸುವ ಸಂಕ್ಷಿಪ್ತ ಮಾಹಿತಿಯೊಂದಿಗೆ ಡಿಸೆಂಬರ್ 4ರೊಳಗೆ ಇ–ಮೇಲ್ ವಿಳಾಸ ರಿಜಚಿರಚಿಜಚಿರ@ರಟಚಿಟ.ಛಿಂಟ ಅಥವಾ ಖುದ್ದಾಗಿ/ಪೋಸ್ಟ್ ಮುಖಾಂತರ ಜಂಟಿ ಕೃಷಿ ನಿರ್ದೇಶಕರ ಕಛೇರಿ, ಮುಳಗುಂದ ನಾಕಾ, ನೌಕರರ ಭವನದ ಹತ್ತಿ, ಗದಗ ವಿಳಾಸಕ್ಕೆ ಕಳುಹಿಸಲು ತಿಳಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಭಾಗವಹಿಸುವ ಅಭ್ಯರ್ಥಿಗಳು ಪಾಲಿಸಬೇಕಾದ ಸೂಚನೆಗಳು** : ಪ್ರತಿ ಸ್ಪರ್ಧಿಗೆ ಸಿರಿಧಾನ್ಯದ ಒಂದು ಸಿಹಿ ಅಥವಾ ಖಾರದ ತಿನಿಸು ಅಥವಾ ಒಂದು ಮರೆತು ಹೋದ ಖಾದ್ಯ (ಸಸ್ಯಾಹಾರಿ ತಿನಿಸುಗಳು ಮಾತ್ರ) ತಯಾರಿಸುವ ಅವಕಾಶವಿರುತ್ತದೆ. ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು, ಮನೆಯಲ್ಲಿಯೇ ತಯಾರಿಸಿ, ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ 06.12.2024ರಂದು ಸರಿಯಾಗಿ 11 ಗಂಟೆಗೆ ಪ್ರದರ್ಶಿಸುವುದು. ತಯಾರಿಸಿದ ತಿನಿಸುಗಳ ಪ್ರದರ್ಶನ ಬಳಸಿದ ಸಾಮಗ್ರಿಗಳು ತೋರಿಕೆ, ರುಚಿ, ಸುವಾಸನೆ, ಪೌಷ್ಟಿಕತೆಗಳ ಮೇಲೆ ಅಂತಿಮ ತೀರ್ಪು ಕೈಗೊಳ್ಳಲಾಗುವುದು.

ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಮರೆತು ಹೋದ ಖಾದ್ಯಗಳ ತಿನಿಸಿಗೆ ಪ್ರತ್ಯೇಕ ಬಹುಮಾನವಿರುತ್ತದೆ. ಪ್ರಥಮ, ದ್ವಿತಿಯ ಹಾಗೂ ತೃತೀಯ ಬಹುಮಾನವಾಗಿ ತಲಾ ರೂ. 5000, ರೂ. 3,000 ಹಾಗೂ ರೂ. 2,000 ನೀಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದವರು ನಿಗದಿತ ದಿನಾಂಕದಂದು ಬೆಂಗಳೂರಿನಲ್ಲಿ ಏರ್ಪಡಿಸುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಖಾದ್ಯವನ್ನು ತಯಾರಿಸಲು ಬೇಕಾಗುವ ಸಾಮಗ್ರಿಗಳನ್ನು ತಾವೇ ತೆಗೆದುಕೊಂಡು, ನಿಗದಿತ ಸ್ಥಳ ಹಾಗೂ ಸಮಯದಲ್ಲಿ ಖುದ್ದಾಗಿ ಖಾದ್ಯವನ್ನು ಅಲ್ಲಿಯೇ ತಯಾರಿಸಲು ಸಿದ್ಧರಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ಸೀಮಾ ಸವಣೂರ, ಸಕೃನಿ (ರೈ.ಮ) ಮೊ: 8277931425 ಹಾಗೂ ಮಂಜುನಾಥ ಭರಮಗೌಡ ಮೊ:8217773915 ಇವರನ್ನು ಸಂಪರ್ಕಿಸಬಹುದಾಗಿದೆ


**ಗ್ರಾಮ ಪಂಚಾಯತ, ಕಾರ್ಯಾಲಯ ರಾಮಗಿರಿ,**

ತಾಲೂಕ: ಲಕ್ಷ್ಮೇಶ್ವರ ಜಿಲ್ಲಾ: ಗದಗ

ಸಂ.ಗ್ರಾ.ಪಚಿಹು/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:25/11/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ರಾಮಗಿರಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರ್ಮ್ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ರಾಮಗಿರಿ ಗ್ರಾಮದ ಹುಬ್ಬಳ್ಳಿ ಮುಖ್ಯ ರಸ್ತೆಯಿಂದ ಮಾಡಳ್ಳಿಯವರ ಮನೆವರೆಗೆ ಒಳಚರಂಡಿ ನಿರ್ಮಾಣ ಮಾಡುವುದು. | 110531.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ರಾಮಗಿರಿ ಗ್ರಾಮದ ನಾರಾಯಣಪ್ಪ ಬಡಿಗೇರ ಇವರ ಮನೆಯಿಂದ ಬಿಶೆಟ್ಟಿಯವರ ಮನೆವರೆಗೆ ಒಳಚರಂಡಿ ನಿರ್ಮಾಣ ಮಾಡುವುದು. | 110531.00 | 500 | |
| 3 | ರಾಮಗಿರಿ ಗ್ರಾಮದ ಬಸವಣ್ಣೆಪ್ಪ ಬೆಟಗೇರಿ ಇವರ ಜಾಗೆಯಿಂದ ಹನಮಪ್ಪ ಮುಶೆಪ್ಪನವರ ಜಾಗೆವರೆಗೆ ಸಿ ಸಿ ಗಟಾರ ನಿರ್ಮಾಣ ಮಾಡುವುದು. | 134561.00 | 500 | |
| 4 | ರಾಮಗಿರಿ ಗ್ರಾಮದ ಹನಮಂತಪ್ಪ ಪ ಕುರಿ ಇವರ ಮನೆ ಹತ್ತಿರ ಸಿ ಸಿ ಗಟಾರ ನಿರ್ಮಾಣ ಮಾಡುವುದು. | 64136.00 | 500 | |
| 5 | ರಾಮಗಿರಿ ಗ್ರಾಮದ ಸುರೇಶ ಕಾಳಿ ಮನೆಯಿಂದ ಬೀರಪ್ಪ ಕಾಳೆ ಮನೆವರೆಗೆ ಸಿ.ಸಿ ರಸ್ತೆ ನಿರ್ಮಾಣ ಮಾಡುವುದು. | 130992.00 | 500 | |
| 6 | ಬಸಾಪುರ ಗ್ರಾಮದ ಬಸವೇಶ್ವರ ದೇವಸ್ಥಾನದಿಂದ ಸಣ್ಣಕೆರೆವರೆಗೆ ಸಿ ಸಿ ಗಟಾರ ನಿರ್ಮಾಣ ಮಾಡುವುದು. | 96205.00 | 500 | |
| 7 | ಬಸಾಪುರ ಗ್ರಾಮದ ಸಣ್ಣಕೆರೆಯಿಂದ ದೊಡ್ಡ ಕೆರೆವರೆಗೆ ಸಿ ಸಿ ಗಟಾರ ನಿರ್ಮಾಣ ಮಾಡುವುದು. | 96205.00 | 500 | |
| 8 | ಬಸಾಪುರ ಗ್ರಾಮದ ನಾಗಪ್ಪ ಈರಪ್ಪ ಬಳಿಗಾರ ಮನೆಯಿಂದ ಬಸಪ್ಪ ಬಜಂತ್ರಿ ಮನೆವರೆಗೆ ಸಿ.ಸಿ ರಸ್ತೆ ನಿರ್ಮಾಣ ಮಾಡುವುದು. | 122287.00 | 500 | |
| 9 | ರಾಮಗಿರಿ ಗ್ರಾಮದ ಪ್ರೌಢ ಶಾಲೆಯಲ್ಲಿ ಆಟದ ಮೈದಾನ ನಿರ್ಮಾಣ ಮಾಡುವುದು | 187521.00 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ **ದಿನಾಂಕ: 28/11/2024 ರಿಂದ 03/12/2024** ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ **ದಿನಾಂಕ: 05/12/2024**, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ **ದಿನಾಂಕ: 05/12/2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ **ದಿನಾಂಕ ಹಾಗೂ ಸಮಯ: 06/12/2024 ರ ಮಧ್ಯಾಹ್ನ 3.00 ಗಂಟೆ**

**ನಿಬಂಧನೆಗಳು** : 1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ರಾಮಗಿರಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/– ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ರಾಮಗಿರಿ

ಸಹಿ/– ಅಧ್ಯಕ್ಷರು ಗ್ರಾಮ ಪಂಚಾಯತಿ ರಾಮಗಿರಿ

ವಾ.ಸಾ.ಇ/ಗದಗ/408/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka